# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 62 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 19–09–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 62 | RNI No: KARKAN/2023/88462 | Chitradurga | Date: 19-09-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ವಿರಾಟ್ ಹಿಂದೂ ಗಣಪತಿಯ ಶೋಭಾಯಾತ್ರೆಗೆ ಹೊಸದುರ್ಗ ಸಜ್ಜು 2

ಅಕ್ರಮ ಅದಿರು, ಜಲ್ಲಿ, ಮರಳು ಸಾಗಿಸುವ ಲಾರಿಮೇಲೆ ಜಿಪಿಎಸ್ ನಿಗಾ ಯಶಸ್ವಿ 3

ಮನಸಿನೊಳಗೊಂದು ಪಯಣ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ನವೋದಯ ಶಾಲೆ ಪ್ರವೇಶಕ್ಕೆ ಸೆ.23 ವರೆಗೆ ಕಾಲಾವಕಾಶ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕು ಉಡುವಳ್ಳಿಯಲ್ಲಿನ ಜವಾಹರ್ ನವೋದಯ ವಿದ್ಯಾಲಯದಲ್ಲಿ 2025–26ನೇ ಸಾಲಿಗೆ 6ನೇ ತರಗತಿ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಸೆ. 23 ವರೆಗೆ ವಿಸ್ತರಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಉಚಿತವಾಗಿ ನವೋದಯ ವಿದ್ಯಾಲಯ ಸಮಿತಿಯ ವೆಬ್ ಸೈಟ್ https://cbseitms.rcil.gov.in/nvs/Index/Registration ಮೂಲಕ ಸಲ್ಲಿಸಬಹುದು ಎಂದು ವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸೆ.21, 22 ರಂದು ದಸರಾ ಕ್ರೀಡಾ ಕೂಟ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ, ತಾಲ್ಲೂಕು ಪಂಚಾಯತ್‌ಗಳ ಮತ್ತು ವಿವಿಧ ಕ್ರೀಡಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಇದೇ ಸೆ.21, 22 ರಂದು 2024–25 ನೇ ಸಾಲಿನ ತಾಲ್ಲೂಕು ಮಟ್ಟದ ದಸರಾ ಕ್ರೀಡಾ ಕೂಟವನ್ನು ಆಯೋಜಿಸಲಾಗಿದೆ. ಸೆ.21 ರಂದು ಬೆಳಿಗ್ಗೆ 09 ಗಂಟೆಗೆ ಹೊಸದುರ್ಗ ತಾಲ್ಲೂಕು ಕ್ರೀಡಾ ಕೂಟದಲ್ಲಿ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ವಾಲಿಬಾಲ್, ಖೋಖೋ, ಕಬಡ್ಡಿ, ಫುಟ್‌ಬಾಲ್, ಥ್ರೋಬಾಲ್, ಯೋಗ ಕ್ರೀಡೆಗಳನ್ನು ಆಯೋಜಿಸಲಾಗಿದೆ. ಸೆ.22 ರಂದು ಬೆಳಿಗ್ಗೆ 09 ಗಂಟೆಗೆ ಹಿರಿಯೂರು ತಾಲ್ಲೂಕು ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ವಾಲಿಬಾಲ್, ಫುಟ್‌ಬಾಲ್, ಥ್ರೋಬಾಲ್, ಯೋಗ ಮತ್ತು ನೆಹರೂ ಕ್ರೀಡಾಂಗಣದಲ್ಲಿ ಖೋಖೋ, ಕಬಡ್ಡಿ ಕ್ರೀಡೆ ಹಾಗೂ ಹೊಳಲ್ಕೆರೆ ತಾಲ್ಲೂಕಿನ ರಾಮಗಿರಿ ಎಸ್.ಜೆ.ಎಂ ಪ್ರೌಢಶಾಲೆ, ಮೊಳಕಾಲ್ಮೂರು ತಾಲ್ಲೂಕಿನ ಕೊಂಡ್ಲಹಳ್ಳಿ ಗ್ರಾಮಾಂತರ ಪ್ರೌಢಶಾಲೆ, ಚಳ್ಳಕೆರೆ ತಾಲ್ಲೂಕಿನ ಪರಶುರಾಂಪುರ ಕರ್ನಾಟಕ ಪಬ್ಲಿಕ್ ಶಾಲೆ, ಚಿತ್ರದುರ್ಗ ತಾಲ್ಲೂಕಿನ ಜಿಲ್ಲಾ ಕ್ರೀಡಾಂಗಣ ಆವರಣದಲ್ಲಿ ಅಥ್ಲೆಟಿಕ್ಸ್, ವಾಲಿಬಾಲ್, ಖೋಖೋ, ಕಬಡ್ಡಿ, ಫುಟ್‌ಬಾಲ್, ಥ್ರೋಬಾಲ್, ಯೋಗ ಕ್ರೀಡೆಗಳನ್ನು ಆಯೋಜಿಸಲಾಗಿದೆ.ದಸರಾ ಕ್ರೀಡಾ ಕೂಟದಲ್ಲಿ ಎಲ್ಲಾ ವಯೋಮಾನದವರು ಭಾಗವಹಿಸಬಹುದು. ತಾಲ್ಲೂಕು ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟದಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನಪಡೆದವರು ಹಾಗೂ ಗುಂಪು ಆಟಗಳಲ್ಲಿ ಪ್ರಥಮ ಸ್ಥಾನ ಪಡೆದವರು ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಹೊಸದುರ್ಗ ವಿ.ಹನುಮಂತಪ್ಪ–99001623062, ಹಿರಿಯೂರು ಶಿವಪ್ರಸಾದ್–9986615315, ಬಾಲಾಜಿ–87460264439,ಹೊಳಲ್ಕೆರೆರುದ್ರೇಶ್–9901669702, ಮೊಳಕಾಲ್ಮೂರು–9916061416, ಚಳ್ಳಕೆರೆ ತಿಪ್ಪೇಸ್ವಾಮಿ–9611344434, ಚಿತ್ರದುರ್ಗ ಮಹಮ್ಮದ್ ಮುಹೀಬುಲ್ಲಾ–9611673475 ಹಾಗೂ ಕಚೇರಿಯ ದೂರವಾಣಿ ಸಂಖ್ಯೆ–08194–235635 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಇಂದು ವಿದ್ಯುತ್ ವ್ಯತ್ಯಯ

» **ಚಿತ್ರದುರ್ಗ**

220 ಕೆ.ವಿ.ಎ ಎಸ್.ಆರ್.ಎಸ್, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದವರು ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿರುವ 220/66/11 ಕೆ.ವಿ ಚಿತ್ರದುರ್ಗ, 66/11 ಕೆ.ವಿ ಚಿತ್ರದುರ್ಗ, ಭರಮಸಾಗರ, ಸಿರಿಗೆರೆ, ವಿಜಾಪುರ, ಹಿರೇಗುಂಟನೂರು, ಪಂಡರಹಳ್ಳಿ, ಹೆಚ್.ಡಿ.ಪುರ, ಚಿತ್ರಹಳ್ಳಿ, ಮಾಡನಾಯಕನಹಳ್ಳಿ, ತುರುವನೂರು, ಬಾಲೇನಹಳ್ಳಿ, ಹೊಳಲ್ಕೆರೆ, ಜೆ.ಎನ್.ಕೋಟೆ, ವಿ.ವಿ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯಕ್ಕಾಗಿ ವಿದ್ಯುತ್ ವಿತರಣಾ ಕೇಂದ್ರಗಳಿಗೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ ಈ ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ ಎನ್.ಜೆ.ವೈ ಮತ್ತು ಕೃಷಿ 11 ಕೆ.ವಿ ಮಾರ್ಗಗಳಲ್ಲಿ ಇದೇ ಸೆ.19ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆ ಯಾಗುವ ಪ್ರದೇಶಗಳು : ಚಿತ್ರದುರ್ಗ, ಭರಮಸಾಗರ, ಸಿರಿಗೆರೆ, ವಿಜಾಪುರ, ಹಿರೇಗುಂಟನೂರು, ಪಂಡರಹಳ್ಳಿ, ಹೆಚ್.ಡಿ.ಪುರ, ಚಿತ್ರಹಳ್ಳಿ, ಮಾದನಾಯಕನಹಳ್ಳಿ, ತುರುವನೂರು, ಬಾಲೇನಹಳ್ಳಿ, ಹೊಳಲ್ಕೆರೆ, ಜೆ.ಎನ್.ಕೋಟೆ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

**ಶಾಂತಿ ಹಾಗೂ ಸೌಹಾರ್ಧತೆಯಿಂದ ಮೆರವಣಿಗೆ ಆಯೋಜಿಸಲು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ**

ಸೆ.28 ರಂದು ಹಿಂದೂ ಮಹಾಗಣಪತಿ ವಿಸರ್ಜನೆ ಹಾಗೂ ಶೋಭಾಯಾತ್ರೆ

# 3 ಲಕ್ಷ ಜನ ಭಾಗವಹಿಸುವ ನಿರೀಕ್ಷೆ

» **ಚಿತ್ರದುರ್ಗ**

ಸೆ.28 ರಂದು ನಗರದಲ್ಲಿ ನಡೆಯಲಿರುವ ಹಿಂದೂ ಮಹಾಗಣಪತಿ ವಿಸರ್ಜನಾ ಮೆರವಣಿಗೆಹಾಗೂಶೋಭಾಯಾತ್ರೆಯನ್ನು ಶಾಂತಿ ಹಾಗೂ ಸೌಹಾರ್ಧತೆಯಿಂದ ನಡೆಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನಾ ಸಮಿತಿ ಸದಸ್ಯರಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಈ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನಾ ಸಮಿತಿ ಸದಸ್ಯರೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಗಣಪತಿ ವಿಸರ್ಜನಾ ಮೆರವಣಿಗೆ ಹಾಗೂ ಶೋಭಾಯಾತ್ರೆಗೆ ಜಿಲ್ಲೆ ಸೇರಿದಂತೆ ಹೊರ ರಾಜ್ಯ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 3 ಲಕ್ಷ ಜನ ಭಾಗವಹಿಸುವ ನಿರೀಕ್ಷೆಯಿದೆ. ಶಾಂತಿ ಹಾಗೂ ಸುವ್ಯವಸ್ಥೆಯಿಂದ ಮೆರವಣಗೆ ನಡೆಯಲು ಅನುವಾಗುವಂತೆ ಪೊಲೀಸ್ ಇಲಾಖೆಯಿಂದ ಈಗಾಗಲೇ ಸೂಕ್ತ ಬಂದೋಬಸ್ತ್‌ಗೆ ಕ್ರಮ ಕೈಗೊಳ್ಳಲಾಗಿದೆ. ಸಂಘಟಕರು ಬೆಳಗ್ಗೆ 11 ಗಂಟೆಗೆ ಸರಿಯಾಗಿ ಮೆರವಣಿಗೆಯನ್ನು ಪ್ರಾರಂಭಿಸಿ ರಾತ್ರಿ 9 ಗಂಟೆಯ ಒಳಗೆ ಮೆರವಣಿಗೆ ಮುಕ್ತಾಯಗೊಳ್ಳುವಂತೆ ನೋಡಿಕೊಳ್ಳಬೇಕು ಎಂದರು.ನಗರದ ಬಿ.ಡಿ ರಸ್ತೆ ಹಾಗೂ ಹೊಳಲ್ಕೆರೆ ರಸ್ತೆಯಲ್ಲಿ ಸುಗಮವಾಗಿ ಮೆರವಣಿಗೆ ಹಾದು ಹೋಗುವಂತೆ ನಗರಸಭೆಯಿಂದ ಬ್ಯಾರಿಕೇಡ್‌ಗಳನ್ನು ಅಳವಡಿಸಬೇಕು. ಪೊಲೀಸರು ವೀಕ್ಷಣೆಗೆ ಅನುಕೂಲವಾಗುವಂತೆ ವಾಚ್‌ಟವರ್ ನಿರ್ಮಿಸಬೇಕು. ಸ್ವಚ್ಛತೆ, ಕುಡಿಯುವ ನೀರು ಹಾಗೂ ಸಂಚಾರಿ ಶೌಚಾಲಯಗಳ ವ್ಯವಸ್ಥೆ ಮಾಡಬೇಕು. ರಸ್ತೆಯಲ್ಲಿ ತಗ್ಗು ಗುಂಡಿಗಳು ಇದ್ದರೇ, ತಕ್ಷಣವೇ ಮುಚ್ಚುವ ಕೆಲಸ ಮಾಡಬೇಕು. ಮೆರವಣಿಗೆ ಸಾಗುವ ರಸ್ತೆ ಹಾಗೂ ಅಸು ಪಾಸಿನ ಸ್ಥಳದಲ್ಲಿ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳ ಮೇಲೆ ಸಾರ್ವಜನಿಕರು ಹತ್ತಿ ನಿಲ್ಲದಂತೆ ನಿರ್ಬಂಧ ವಿಧಿಸಬೇಕು. ಮೆರವಣಿಗೆ ವೇಳೆ ಹಠಾತ್ ಅನಾರೋಗ್ಯಕ್ಕೆ ತುತ್ತಾದವರನ್ನು ಆರೈಕೆ ಮಾಡಲು ಮೆರವಣಿಗೆ ಸಾಗುವ ಹಾದಿಯಲ್ಲಿ ಸೇಫ್ ಹೌಸ್‌ಗಳನ್ನು ಗುರುತಿಸಬೇಕು. ಆರೋಗ್ಯ ಇಲಾಖೆಯಿಂದ ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತ್ಯೇಕ ವಾರ್ಡ್‌ವೊಂದನನ್ನು ಮೀಸಲಿರಿಸಿ, ಅಗತ್ಯ ವೈದ್ಯರನ್ನು ನೇಮಿಸಬೇಕು. ಮೆರವಣಿಗೆ ಸಾಗುವ ಹಾದಿಯಲ್ಲಿ 4 ಆಂಬ್ಯುಲೆನ್ಸ್‌ಗಳನ್ನು ನಿಯೋಜಿಸಬೇಕು. ಬೆಸ್ಕಾಂ ಅಧಿಕಾರಿಗಳು ಮೆರವಣಿಗೆ ವೇಳೆ ವಿದ್ಯುತ್ ಅಡಚಣೆಯಾಗದಂತೆ ಕ್ರಮ ಕೈಗೊಳ್ಳಬೇಕು. ಮೆರವಣಿಗೆ ಸಾಗುವ ಹಾದಿಯಲ್ಲಿ ವಿದ್ಯುತ್ ತಂತಿಗಳನ್ನು ಎತ್ತರಿಸುವಂತೆಜಿಲ್ಲಾಧಿಕಾರಿಟಿ.ವೆಂಕಟೇಶ್ ಸೂಚನೆ ನೀಡಿದರು.

**ಬಂದೋಬಸ್ತ್ ಕಾರ್ಯಕ್ಕೆ 3000 ಪೊಲೀಸ್ ಸಿಬ್ಬಂದಿ ನೇಮಕ :** ಗಣಪತಿ ವಿಸರ್ಜನಾ ಮೆರವಣಿಗೆ ಹಾಗೂ ಶೋಭಾಯಾತ್ರೆ ಬಂದೋಬಸ್ತ್ ಕಾರ್ಯಕ್ಕೆ 14 ಡಿವೈಸ್‌ಪಿ, 33 ಸಿಪಿಐ, 112 ಪಿಎಸ್‌ಐ, 167 ಎಎಸ್‌ಐ, 1997 ಪೊಲೀಸ್ ಕಾನ್ಸ್‌ಟೇಬಲ್, 658 ಗೃಹ ರಕ್ಷಕರು ಸೇರಿ 3000 ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗುವುದು. ಇದರೊಂದಿಗೆ 15 ಕೆಎಸ್‌ಆರ್‌ಪಿ, 11 ಡಿಎಆರ್, 4 ಕ್ಯೂಆರ್‌ಟಿ ತುಕಡಿಗಳನ್ನು ನಿಯೋಜಿಸಲಾಗುವುದು. 81 ಕಡೆ ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗುವುದು. 20 ವಿಡಿಯೋಗ್ರಾಫರ್‌ಗಳು ಮೆರವಣಿಗೆ ಚಿತ್ರೀಕರಣವನ್ನು ಮಾಡಲಿದ್ದಾರೆ. 9 ಚೆಕ್ ಪೋಸ್ಟ್‌ಗಳನ್ನು ನಿರ್ಮಿಸಲಾಗುವುದು. ಪಟಾಕಿ ಬಳಕೆಗೆ ಅವಕಾಶವಿಲ್ಲ. ಮೆರವಣಿಗೆಯಲ್ಲಿಡಿಜೆಬಳಸಲುಪೊಲೀಸ್ ಇಲಾಖೆ ನೀಡುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸಬೇಕು. ಹೊರ ಜಿಲ್ಲೆಗಳಿಂದ ಆಗಮಿಸುವ ಪೊಲೀಸ್ ಸಿಬ್ಬಂದಿಗೆ ತಂಗಲು ನಗರದ ಹಾಸ್ಟೆಲ್‌ಗಳಲ್ಲಿ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ ಬಂಡಾರು ಸಭೆಯಲ್ಲಿ ತಿಳಿಸಿದರು.ಸೆ.27 ಹಾಗೂ 28 ರಂದು ಜಿಲ್ಲಾದ್ಯಂತ ಮದ್ಯ ಮಾರಾಟ ನಿಷೇಧಕ್ಕೆ ಆದೇಶಿಸುವಂತೆ ಈಗಾಗಲೇ ಜಿಲ್ಲಾಧಿಕಾರಿಗಳ ಕಚೇರಿಗೆ ಕೋರಿಕೆ ಸಲ್ಲಿಸಲಾಗಿದೆ. ಶೋಭಾಯಾತ್ರೆಯ ದಿನ ಬಿ.ಡಿ.ರಸ್ತೆಯಲ್ಲಿ ವಾಹನಗಳ ಓಡಾಟ ನಿರ್ಬಂಧಿಸಿ, ಬದಲಿ ಮಾರ್ಗದಲ್ಲಿ ಬಸ್ ಹಾಗೂ ಸಾರ್ವಜನಿಕ ವಾಹನಗಳ ಮಾರ್ಗ ಬದಲಾವಣೆ ಆದೇಶ ಹೊರಡಿಸಲು ಕೋರಿಕೆ ಸಲ್ಲಿಸುವುದಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ ಬಂಡಾರು ಹೇಳಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಅಬಕಾರಿ ಉಪನಿರೀಕ್ಷಕ ಮಾದೇಶ್, ಉಪವಿಭಾಗಧಿಕಾರಿ ಕಾರ್ತಿಕ್, ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನಾ ಸಮಿತಿಯ ಬದ್ರನಾಥ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಮಿತಿ ಪದಾಧಿಕಾರಿಗಳು ಇದ್ದರು.

## ಅ.02 ರವರೆಗೆ ಸ್ವಚ್ಛತಾ ಹೀ ಸೇವಾ ಪಾಕ್ಷಿಕ: ಸಿಇಒ

» **ಚಿತ್ರದುರ್ಗ**



ಗ್ರಾಮೀಣ ಪ್ರದೇಶದ ಜನರಲ್ಲಿ ನೈರ್ಮಲ್ಯ, ಶುಚಿತ್ವ ಕುರಿತು ಅರಿವು ಮೂಡಿಸುವ ಉದ್ದೇಶದೊಂದಿಗೆ ಪ್ರತಿ ವರ್ಷವೂ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಆಯೋಜಿಸಲಾಗುತ್ತಿದೆ. ಅದರಂತೆ ಈ ಬಾರಿಯೂ ಸ್ವಭಾವ–ಸ್ವಚ್ಛತೆ, ಸಂಸ್ಕಾರ–ಸ್ವಚ್ಛತೆ ಘೋಷವಾಕ್ಯದೊಂದಿಗೆ ಸೆ.17 ರಿಂದ ಅ.2 ರವರೆಗೆ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ. ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯ ಹಾಗೂ ಕೇಂದ್ರ ನಗರ ವಸತಿ ವ್ಯವಹಾರಗಳ ಸಚಿವಾಲಯವು ಕಾರ್ಯಕ್ರಮ ಆಯೋಜಿಸಿದ್ದು, ಸೆ.17 ರಂದು ಜಿಲ್ಲೆಯ ಎಲ್ಲಾ ಗ್ರಾಮಪಂಚಾಯಿತಿಗಳಲ್ಲಿ ಉದ್ಘಾಟನೆ ಮೂಲಕ ಚಾಲನೆ ನೀಡಿ, ಅ.02ರಂದು ವಿಶೇಷ ಗ್ರಾಮಸಭೆ ನಡೆಸುವ ಮೂಲಕ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಆಂದೋಲನವನ್ನು ಅಕ್ಟೋಬರ್ 02ರಂದು ಸ್ವಚ್ಛ ಭಾರತ ದಿನವನ್ನಾಗಿ ಆಚರಿಸಲಾಗುವುದು. ಗ್ರಾಮ ಮತ್ತು ನಗರದಗಳಲ್ಲಿ ಸ್ವಚ್ಛತೆಯನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಕಸ ಸಂಗ್ರಹಣೆ ಮೂಲದಲ್ಲಿ ಕಸ ವಿಂಗಡಣೆ, ವಿಲೇವಾರಿ ಮತ್ತು ಸ್ವಚ್ಛತಾ ಶ್ರಮಧಾನ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮೂಲಕ ಸಂಪೂರ್ಣ ಗ್ರಾಮವನ್ನು ಕಸ ಮುಕ್ತವನ್ನಾಗಿಸಲು ವಿವಿಧ ಜನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.


ಪುಟ ↘ 2


## ಏರಿಕೆ ಹಾದಿ ಹಿಡಿದ ಈರುಳ್ಳಿ

» **ನಮ್ಮಜನ ಸಮಾಚಾರ**

ಬೆಂಗಳೂರು: ದಿನದಿಂದ ದಿನಕ್ಕೆ ಸಾಮಾನ್ಯ ಜನರ ಬದುಕು ದುಬಾರಿಯಾಗುತ್ತಿದೆ. ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿದ್ದು, ಬಡವರು ಮಧ್ಯಮ ವರ್ಗದವರು ಜೀವನ ನಡೆಸುವುದೇ ಕಷ್ಟವಾಗಿ ಹೋಗಿದೆ. ಈ ಮಧ್ಯೆ ಈರುಳ್ಳಿ ಬೆಲೆ ಏರಿಕೆಯಾಗಿದ್ದು, ಗ್ರಹಾಕರಿಗೆ ಕಣ್ಣೀರು ತರಿಸುತ್ತಿದೆ. ಸದ್ಯ ಕರ್ನಾಟಕದ ಹಲವೆಡೆ ಅತಿಯಾದ ಮಳೆಯ ಕಾರಣ ಬೆಳೆ ನೀರುಪಾಲಗುತ್ತಿದ್ದರೆ, ಮತ್ತೊಂದೆಡೆ ಈರುಳ್ಳಿ ಮಳೆಯಿಂದಾಗಿ ಇಟ್ಟಲ್ಲೇ ಕೊಳೆತು ಹೋಗುತ್ತಿದೆ. ಹೀಗಾಗಿ ಹಬ್ಬದ ವಾರದಲ್ಲಿ 50 ರೂ. ಇದ್ದ ಈರುಳ್ಳಿಯ ಬೆಲೆ ಇದೀಗ 60 ರಿಂದ 70 ರೂಪಾಯಿ ಆಗಿದೆ.

**ಈರುಳ್ಳಿ ಉತ್ಪಾದನೆ ಭಾರಿ ಕುಸಿತ:** ರಾಜ್ಯದಲ್ಲಿ ಹೆಚ್ಚು ಮಳೆಯಾಗುತ್ತಿರುವ ಪರಿಣಾಮ ಈರುಳ್ಳಿಯ ಉತ್ಪಾದನೆಯಲ್ಲಿ ಭಾರಿ ಕುಸಿತವಾಗಿದೆ. ಹೀಗಾಗಿ ಮಾರುಕಟ್ಟೆಗೆ ಹೆಚ್ಚಿನ ಪ್ರಮಾಣದಲ್ಲಿ ಈರುಳ್ಳಿ ಬರುತ್ತಿಲ್ಲ. ಪರಿಣಾಮವಾಗಿ ಪೂರೈಕೆ ಕೂಡ ಕಡಿಮೆಯಾಗಿದೆ.


ಪುಟ ↘ 2


**ಪ್ರಮುಖ ಸುದ್ದಿ**

ನೂತನ ಸಂಸದ ಗೋವಿಂದ ಎಂ.ಕಾರಜೋಳರವರಿಗೆ ರಾಮಜೋಗಿಹಳ್ಳಿ ಕಾರ್ಯಕರ್ತರ ಅಭಿನಂದನಾ ಸಮಾರಂಭ

# ಭದ್ರಾ ಮೇಲ್ದಂಡೆ ಯೋಜನೆಗೆ ಹಣ ತರುವ ಭರವಸೆ

» **ಚಳ್ಳಕೆರೆ**

ಬರದನಾಡು ಚಿತ್ರದುರ್ಗ ಜಿಲ್ಲೆಯನ್ನು ನೀರಾವರಿ ಪ್ರದೇಶವನ್ನಾಗಿ ಮಾಡುವ ಭಾರತೀಯ ಜನತಾ ಪಕ್ಷದ ಸಂಕಲ್ಪಕ್ಕೆ ಇನ್ನೂ ಕೆಲವೇ ದಿನಗಳಲ್ಲಿ ಉತ್ತರ ದೊರೆಯಲಿದೆ. ಕಾರಣ, ಈ ಭಾಗದ ಸಂಸದ ಸದಸ್ಯರು, ರಾಜ್ಯದ ಮಾಜಿ ಉಪಮುಖ್ಯಮಂತ್ರಿಗಳಾದ ಗೋವಿಂದ ಎಂ.ಕಾರಜೋಳ ಗೆಲುವು ಸಾಧಿಸಿದ ಕೂಡಲೇ ಭದ್ರಾ ಮೇಲ್ದಂಡೆ ಯೋಜನೆಗೆ ಹಣವನ್ನು ಪೂರ್ಣಪ್ರಮಾಣದಲ್ಲಿ ಒದಗಿಸುವ ಭರವಸೆ ನೀಡಿದ್ದು, ಅದು ಶೀಘ್ರದಲ್ಲೇ ಈಡೇರಲಿದೆ ಎಂದು ಬಿಜೆಪಿ ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ತಿಳಿಸಿದರು.



ಅವರು, ತಾಲ್ಲೂಕಿನ ರಾಮಜೋಗಿಹಳ್ಳಿ ಗ್ರಾಮದಲ್ಲಿ ಸಂಸದರಾಗಿ ಆಯ್ಕೆಯಾದ ಗೋವಿಂದ ಎಂ.ಕಾರಜೋಳ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಕಳೆದ ಜೂನ್ 24ರಂದು ಈ ಕ್ಷೇತ್ರದ ಲೋಕಸಭಾ ಸದಸ್ಯರಾಗಿ ಆಯ್ಕೆಯಾಗಿದ್ದು, ಗ್ರಾಮದ ಹಿರಿಯರು, ಮುಖಂಡರು ಸಂಸದ ಗೋವಿಂದಕಾರಜೋಳರವರನ್ನು ಅಭಿನಂದಿಸುವ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಗ್ರಾಮದ ಹಿರಿಯ ಮುಖಂಡ ದೇವರಾಜರೆಡ್ಡಿ ನೇತೃತ್ವದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದರು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ನೂತನ ಸಂಸದ ಗೋವಿಂದ ಎಂ.ಕಾರಜೋಳ, ಪ್ರಾರಂಭದಲ್ಲಿ ಈ ಕ್ಷೇತ್ರದಲ್ಲಿ ಸ್ಪರ್ಧಿಸಲು ಅವಕಾಶ ಕ್ಷೀಣಿಸುವ ಸಂದರ್ಭದಲ್ಲಿ ಪಕ್ಷ ನನ್ನ ಮೇಲೆ ವಿಶ್ವಾಸವಿಟ್ಟು ನನಗೆ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟಿತು. ಆದರೆ, ಪಕ್ಷದ ಹಿರಿಯ ಮುಖಂಡರ ಮಾರ್ಗದರ್ಶನ, ಕಾರ್ಯಕರ್ತರ, ಅಭಿಮಾನಿಗಳ ಜವಾಬ್ದಾರಿಯುತ ಕಾರ್ಯ ಹಾಗೂ ಈ ಕ್ಷೇತ್ರದಲ್ಲಿ ಬಿಜೆಪಿಯನ್ನು ಗೆಲ್ಲಿಸಬೇಕೆಂಬ ಜನರ ಸಂಕಲ್ಪ ಪ್ರಧಾನಮಂತ್ರಿ ನರೇಂದ್ರಮೋದಿಯವರ ಜನಮೆಚ್ಚುವ ಯೋಜನೆಗಳ ಪ್ರತಿಫಲವಾಗಿ ಗೆಲುವು ಸಾಧಿಸಿದ್ದೇನೆ. ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ಪೂರೈಸಲು ಅವಶ್ಯವಿರುವ ಹಣವನ್ನು ಬಿಡುಗಡೆಗೊಳಿಸುವಂತೆ ಸಂಬಂಧಪಟ್ಟ ಸಚಿವರಿಗೆ ಮನವಿ ಮಾಡಿದ್ದೇನೆ. ಶೀಘ್ರದಲ್ಲೇ ಪ್ರಧಾನಮಂತ್ರಿಗಳನ್ನು ಭೇಟಿ ಮಾಡಿ ಹಣಬಿಡುಗಡೆ ಗೊಳಿಸುವ ಕಾರ್ಯವನ್ನು ಪ್ರಾಮಾಣಿಕವಾಗಿ ಮಾಡುತ್ತೇನೆ ಎಂದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಎ.ಮುರುಳಿ ಮಾತನಾಡಿ, ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದರಾದ ನಂತರ ಗೋವಿಂದ ಎಂ.ಕಾರಜೋಳ ಪೂರ್ಣಪ್ರಮಾಣದಲ್ಲಿ ತಮ್ಮ ಕಾರ್ಯದಲ್ಲಿ ತೊಡಗಿಕೊಂಡಿದ್ಧಾರೆ. ಕ್ಷೇತ್ರ ವ್ಯಾಪ್ತಿಯಲ್ಲಿ ಯಾವುದೇ ಕಾರ್ಯಕ್ರಮವಾದರೂ ಭೇಟಿ ನೀಡುತ್ತಾರೆ, ಜನರಿಗೆ ಉತ್ತಮವಾಗಿ ಸ್ಪಂದಿಸುತ್ತಾರೆ, ಈ ಕ್ಷೇತ್ರದ ಸಾರ್ವಜನಿಕರ ವಿಶ್ವಾಸವನ್ನು ಗಳಿಸುವಲ್ಲಿ ಅವರು ಯಶಸ್ವಿಯಾಗಿದ್ಧಾರೆಂದರು. ಬಿಜೆಪಿ ಮುಖಂಡ ಕೆ.ಟಿ.ಕುಮಾರಸ್ವಾಮಿ ಮಾತನಾಡಿ, ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯನ್ನು ಸೋಲಿಸಲು ಕಾಂಗ್ರೆಸ್ ಪಕ್ಷ ಭಾರಿವಿಶ್ವಾಸದಿಂದ ಪ್ರಚಾರಕಾರ್ಯದಲ್ಲಿ ತೊಡಗಿತ್ತು. ಆದರೆ, ಕ್ಷೇತ್ರದ ಜನ ಮಾತ್ರ ಕಾಂಗ್ರೆಸ್ ಪಕ್ಷದ ಅಪಪ್ರಚಾರಕ್ಕೆ ಗೋವಿಂದಕಾರಜೋಳರವರನ್ನುಗೆಲ್ಲಿಸುವ ಮೂಲಕ ಉತ್ತರ ನೀಡಿದ್ಧಾರೆಂದರು.

ಕಾರ್ಯಕ್ರಮದಲ್ಲಿ ಸತ್ಯನಾರಾಯಣರೆಡ್ಡಿ, ಜಯರಾಮರೆಡ್ಡಿ, ಸತೀಶ್‌ರೆಡ್ಡಿ, ಜಿ.ಟಿ.ವೆಂಕಟೇಶ್, ರಂಗಪ್ಪ, ಪ್ರಭಾಕರರೆಡ್ಡಿ, ದಿನೇಶ್‌ರೆಡ್ಡಿ, ಕೆ.ನಾಗೇಶ್, ಶ್ರೀಪಾದರೆಡ್ಡಿ ಮುಂತಾದವರು ಉಪಸ್ಥಿತರಿದ್ದರು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್



ಇಂದು ನಡೆದ ಹೋಳಲ್ಕೆರೆ ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಸ್ನೇಹ ಪಬ್ಲಿಕ್ ಶಾಲೆಯ ವಿದ್ಯಾರ್ಥಿನಿಯಾದ ತನಿಷಾ ಟಿ ಪಿ ಅವರು ಬಾಲಕಿಯರ ವಿಭಾಗದ ಗುಂಡು ಎಸೆತದಲ್ಲಿ ಪ್ರಥಮ ಸ್ಥಾನವನ್ನು ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆ ಆಗಿರುವುದರಿಂದ ಶಾಲೆಯ ಕಾರ್ಯದರ್ಶಿಗಳಾದ ಶ್ರೀಯುತ ಜೆ ಎಸ್ ವಸಂತ್ ಅವರು ಅಭಿನಂದಿಸಿದರು ಹಾಗೂ ಶಾಲೆಗೆ ಕೀರ್ತಿ ತಂದಿದ್ದಾರೆ ಎಂದು ಹರ್ಷಿಸಿದರು. ಈ ಸಂದರ್ಭದಲ್ಲಿ ಶಾಲೆಯ ಪ್ರಾಂಶುಪಾಲರು ಶಿಕ್ಷಕ ವೃಂದದವರು ಅಭಿನಂದಿಸಿದರು.

## ಅ.02 ರವರೆಗೆ ಸ್ವಚ್ಛತಾ ಹೀ ಸೇವಾ ಪಾಕ್ಷಿಕ: ಜಿ.ಪಂ ಸಿಇಒ ಸೋಮಶೇಖರ್

» ಮೊದಲ ಪುಟದಿಂದ

ಸ್ವಚ್ಛ ಭಾರತ ಅಭಿಯಾನದ 10ನೇ ವಾರ್ಷಿಕೋತ್ಸವವನ್ನು ಸ್ವಭಾವ–ಸ್ವಚ್ಛತೆ, ಸಂಸ್ಕಾರ–ಸ್ವಚ್ಛತೆ ಧ್ಯೇಯವಾಕ್ಯದೊಂದಿಗೆ ಸ್ವಚ್ಛತಾ ಕಿ ಭಾಗಿಧಾರ, ಸಂಪೂರ್ಣ ಸ್ವಚ್ಛತಾ ಚಟುವಟಿಕೆ ಹಾಗೂ ಸಫಾಯಿ ಮಿತ್ರ ಸುರಕ್ಷಾ ಎಂಬ ಮೂರು ವಿಷಯಗಳನ್ನು ಕೇಂದ್ರಿಕರಿಸಿ ಪಾಕ್ಷಿಕ ಕಾರ್ಯಕ್ರಮ ಆಂದೋಲನವನ್ನು ಆಚರಿಸಲಾಗುತ್ತಿದೆ. ಈ ಯೋಜನೆ ಸಾಧನೆಯ ಮೈಲಿಗಲ್ಲನ್ನು ಗೌರವಿಸಲು, ಈ ಅಭಿಯಾನವನ್ನು ಬೃಹತ್ ಪ್ರಮಾಣದಲ್ಲಿ ಸಾರ್ವಜನಿಕ ಸಹಭಾಗಿತ್ವ ಮತ್ತು ಸಮುದಾಯದ ಭಾಗವಹಿಸುವಿಕೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಗ್ರಾಮೀಣ ಪ್ರದೇಶದ ಸ್ವ ಸಹಾಯ ಸಂಘದೊಂದಿಗೆ ನೈರ್ಮಲ್ಯ ಕುರಿತು ಅರಿವು ಸ್ವಚ್ಛತಾ ಪ್ರತಿಜ್ಞಾವಿಧಿ ಸ್ವೀಕಾರ, ಮಾನವ ಸರಪಳಿ ನಿರ್ಮಾಣ, ಜಾಥಾ, ಸಸಿ ನೆಡುವ ಕಾರ್ಯಕ್ರಮ, ಶಾಲಾ–ಕಾಲೇಜುಗಳಲ್ಲಿ ವಿವಿಧ ರೀತಿಯ ಸ್ಪರ್ಧೆಗಳನ್ನು ಆಯೋಜಿಸುವುದು. ಜಲ ಮೂಲ, ಪ್ರವಾಸಿ ತಾಣ, ಧಾರ್ಮಿಕ ಮತ್ತು ಆಧ್ಯಾತ್ಮಿಕ ಸ್ಥಳಗಳಲ್ಲಿನ ಕಸವನ್ನು ಸ್ವಚ್ಛಗೊಳಿಸುವ ಮೂಲಕ ಜನಜಾಗೃತಿ ಮೂಡಿಸುವ ಚುಟುವಟಿಕೆಗಳನ್ನ ಹಮ್ಮಿಕೊಳ್ಳವ ಮೂಲಕ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಕಾರ್ಯಕ್ರಮ ಯಶಸ್ವಿಗೊಳಿಸಲಾಗುವುದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

## ಏರಿಕೆ ಹಾದಿ ಹಿಡಿದ ಈರುಳ್ಳಿ

» ಮೊದಲ ಪುಟದಿಂದ

ಸದ್ಯ ರಾಜ್ಯಕ್ಕೆ ಪುಣೆ, ಮಹಾರಾಷ್ಟ್ರದಿಂದ ಈರುಳ್ಳಿ ತರುಹಿಸಿಕೊಳ್ಳಲಾಗುತ್ತಿದೆ.

**ದಸರಾ ವೇಳೆಗೆ ಈರುಳ್ಳಿ ಬೆಲೆ ಮತ್ತಷ್ಟು ದುಬಾರಿ ಸಾಧ್ಯತೆ:** ದಸರಾ ವೇಳೆಗೆ ಈರುಳ್ಳಿಯ ಬೆಲೆ ಮತ್ತಷ್ಟು ದುಬಾರಿಯಾಗುವ ಸಾಧ್ಯತೆ ಇದೆ. ಈ ಹಿಂದೆ ಉತ್ತರ ಕರ್ನಾಟಕ ಭಾಗದಿಂದ ಈರುಳ್ಳಿ ರಾಜ್ಯಕ್ಕೆ ಪೂರೈಕೆಯಾಗುತ್ತಿತ್ತು. ಆದರೆ, ಈಗ ಉತ್ತರ ಕರ್ನಾಟಕದಲ್ಲಿ ಹೆಚ್ಚು ಮಳೆಯಾಗುತ್ತಿದ್ದು, ಮಳೆಗೆ ಈರುಳ್ಳಿ ಕೊಳೆತು ಹೋಗುತ್ತಿದೆ. ಹೀಗಾಗಿ ಈರುಳ್ಳಿ ಪೂರೈಕೆ ಕಡಿಮೆಯಾಗಿದೆ.

**ಬೆಳ್ಳುಳ್ಳಿ ಬೆಲೆಯೂ ಏರಿಕೆ:** ಈ ಮಧ್ಯೆ ಬೆಳ್ಳುಳ್ಳಿ ಕೆಜಿಗೆ 400 ರೂ. ಆಗಿದೆ. ತರಕಾರಿಗಳ ಬೆಲೆ ಕೂಡ ಕೊಂಚ ಜಾಸ್ತಿಯಾಗಿದೆ. ಮಳೆ ಇದೇ ರೀತಿ ಮುಂದುವರಿದರೆ ತರಕಾರಿ ಹಾಗೂ ಈರುಳ್ಳಿಯ ಬೆಲೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ ಅಂತ ವ್ಯಾಪಾರಸ್ಥರು ಅಂದಾಜಿಸಿದ್ದಾರೆ. ಒಟ್ಟಿನಲ್ಲಿ ಮಳೆಯ ಕಾರಣದಿಂದಾಗಿ ಈರುಳ್ಳಿ ಬೆಲೆ ಒಂದೇ ವಾರದಲ್ಲಿ 60 ರಿಂದ 70 ರೂ. ಏರಿಕೆಯಾಗಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಬೆಲೆ ಏರಿಕೆಯಾಗುವ ಸಾಧ್ಯತೆ ಇದ್ದು ಗ್ರಾಹಕರ ಜೇಬಿಗೆ ಮತ್ತಷ್ಟು ಕತ್ತರಿ ಬೀಳಲಿದೆ.

## ಕರ್ನಾಟಕ ಆರ್ಯವೈಶ್ಯ ಸಂಘದ ಅಮರಜ್ಯೋತಿ ಯೋಜನೆ ಚೆಕ್ ವಿತರಣೆ



» ಚಳ್ಳಕೆರೆ

ನಗರದವಾಸವಿಕಾಲೋನಿನಿವಾಸಿಎಂ.ಆರ್.ಪಲ್ಲವಿ ನಿಧನರಾದ ಹಿನ್ನೆಲೆಯಲ್ಲಿ ಅಮರಜ್ಯೋತಿ ಯೋಜನೆಯಡಿ ನಾಲ್ಕು ಲಕ್ಷರೂಗಳ ಚೆಕನ್ನು ಕರ್ನಾಟಕ ಆರ್ಯವೈಶ್ಯ ಮಹಾಸಭೆ ನೀಡಿದ್ದು ಸದರಿ ಚೆಕನ್ನು ಆರ್ಯವೈಶ್ಯ ಶಿಕ್ಷಣ ಒಕ್ಕೂಟದ ಅಧ್ಯಕ್ಷ ಅಮರೇಶ್ವರ ಪಲ್ಲವಿ ಪತಿ ಎಂ.ಆರ್.ರಾಜುರವರಿಗೆ ಇಲ್ಲಿನ ವಾಸವಿ ಮಹಲ್‌ನಲ್ಲಿ ಹಸ್ತಾಂತರಿಸಿದರು. ಆರ್ಯವೈಶ್ಯ ಸಂಘದ ಅಧ್ಯಕ್ಷ ಕೃಷ್ಣಮೂರ್ತಿ ಕಾರ್ಯದರ್ಶಿ ಎ.ಎನ್.ಚಿದಾನಂದಗುಪ್ತ, ಉಪಾಧ್ಯಕ್ಷ ಪಿ.ಆರ್.ಪದ್ಮನಾಭಗುಪ್ತ, ಸಂಘದ ಮಾಜಿ ಅಧ್ಯಕ್ಷ ಸಿ.ಎಸ್.ಪ್ರಸಾದ್, ಎಂ.ಆರ್.ಮಧು ಮುಂತಾದವರು ಇದ್ದರು.

### ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಸಭೆ

# ಎಣ್ಣೆ ಉತ್ಪನ್ನಗಳ ಜಾಹೀರಾತು ಅಳವಡಿಕೆಗೆ ಅನುಮತಿ

» ಚಿತ್ರದುರ್ಗ



ಪ್ರಾದೇಶಿಕ ಎಣ್ಣೆಬೀಜ ಬೆಳಗಾರರ ಸಂಘದ ವಾಹನಗಳ ಮೇಲೆ, ಅವರ ಕಂಪನಿಗಳಿಗೆ ಸಂಬಂಧಿಸಿದ ಎಣ್ಣೆ ಉತ್ಪನ್ನಗಳಿಗೆ ಜಾಹೀರಾತು ಅಳವಡಿಕೆಗೆ ಅನುಮತಿ ನೀಡಲಾಗಿದೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಸಭೆಯಲ್ಲಿ ಈ ಕುರಿತು ನಿರ್ಣಯ ಕೈಗೊಳ್ಳಲಾಯಿತು.

ಎಣ್ಣೆ ಬೀಜ ಬೆಳೆಗಾರರು ಹಾಗೂ ಎಣ್ಣೆ ಉತ್ಪಾದಕ ಸಂಸ್ಥೆಗಳು ತಮ್ಮ ವಾಹನಗಳ ಮೇಲೆ ತಮ್ಮದೇ ಕಂಪನಿಗಳ ಎಣ್ಣೆ ಉತ್ಪನ್ನ ಜಾಹೀರಾತು ಅಳವಡಿಸಲು ಅನುಮತಿ ನೀಡುವಂತೆ ಪ್ರಾಧಿಕಾರದಲ್ಲಿ ಮನವಿ ಮಾಡಿದ್ದರು. ಸಾರಿಗೆ ಪ್ರಾಧಿಕಾರವು ಮಧ್ಯಮಗಾತ್ರದ ಸರಕು ಸಾಗಾಣಿಕೆ ವಾಹನಗಳಿಗೆ ವಾರ್ಷಿಕ ರೂ.750 ರಂತೆ ಹಾಗೂ ಭಾರಿ ಗಾತ್ರದ ಸರಕು ಸಾಗಾಣಿಕೆ ವಾಹನಗಳಿಗೆ ವಾರ್ಷಿಕ ರೂ.2000 ಶುಲ್ಕ ವಿಧಿಸಿ ಜಾಹೀರಾತು ಅಳವಡಿಸಲು ಅನುಮತಿ ನೀಡಿದೆ.

ಸಭೆಯಲ್ಲಿ ಮಜಲು ವಾಹನಗಳ ರಹದಾರಿಗೆ ಸಂಬಂದಪಟ್ಟಂತೆ ಒಟ್ಟು 68 ವಿಷಯಗಳು ಮಂಡನೆಯಾದವು. ಇವುಗಳಲ್ಲಿ 22 ಪರಿಷ್ಕೃತ ವೇಳಾಪಟ್ಟಿ ವಿಷಯಗಳಿಗೆ ಪ್ರಾಧಿಕಾರವು ಅನುಮೋದಿಸಿ, ಕಾರ್ಯದರ್ಶಿಯವರಿಗೆ ವೇಳಾಪಟ್ಟಿಯ ಸಭೆಯನ್ನು ಕರೆದು ಪರಿಷ್ಕೃತ ವೇಳಾಪಟ್ಟಿ ನಿಗದಿಪಡಿಸಲು ಸೂಚಿಸಿತು.

ಮಾರ್ಗದ ಕಡಿತ ಹಾಗೂ ಮಾರ್ಗದ ವಿಸ್ತರಣೆ ಹಾಗೂ ಇತರೆ ನ್ಯಾಯಾಲಯದಿಂದ ಪ್ರಾಧಿಕಾರದ ಪರಿಗಣನೆಗೆ ಸ್ವೀಕೃತಿಯಾದ ವಿಷಯಗಳಿಗೆ ಸಂಬಂಧಪಟ್ಟಂತೆ ಅರ್ಜಿದಾರರ ಪರ ವಕೀಲರಿಗೆ ಲಿಖಿತ ಹೇಳಿಕೆಗಳನ್ನು ದಾಖಲಿಸಲು 15 ದಿವಸಗಳ ಕಾಲಾವಕಾಶ ನೀಡಲಾಗಿದೆ. ಆಕ್ಷೇಪಣೆದಾರರ ಪರ ವಕೀಲರಿಗೆ ಈ ಬಗೆಗಿನ ವಿಷಯಗಳಿಗೆ ಆಕ್ಷೇಪಣೆ ಸಲ್ಲಿಸಲು 10 ದಿವಸಗಳ ಕಾಲಾವಕಾಶ ನೀಡಲಾಗಿದೆ. ಈ ವಿಷಯಗಳ ಕುರಿತು ಕಾನೂನುತ್ಮಾಕವಾಗಿ ನಿರ್ಣಯ ಕೈಗೊಳ್ಳಲು ಸಭೆಯಲ್ಲಿ ನಿರ್ಧರಿಸಲಾಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀ□□ಕುಮಾರ್ ಬಂಡಾರು, ಕಾರ್ಯದರ್ಶಿ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ ಎಂ ಕಾಳಿಸಿಂಗೆ, ಪ್ರಾದೇಶಿಕ ಸಾರಿಗೆ ಇಲಾಖೆಯ ಹೇಮಂತ್ ಕುಮಾರ್, ಖಾಸಗಿ ಬಸ್ಸು ಮಾಲೀಕರ ಸಂಘದ ಅಧ್ಯಕ್ಷ ಬಿ.ಎಲ್. ಲಿಂಗಾರೆಡ್ಡಿ ಸೇರಿದಂತೆ ಖಾಸಗಿ ಬಸ್ ಸಂಘದ ಕಾರ್ಯದರ್ಶಿ, ಖಜಾಂಚಿ, ಸಂಘದ ಸದಸ್ಯರು, ಬಸ್ಸು ಮಾಲೀಕರು, ವಕೀಲರು ಸಭೆಯಲ್ಲಿದ್ದರು.

# ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ

» ಚಿತ್ರದುರ್ಗ



ರೈತರ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರೈತ ಸಂಘದವತಿಯಿಂದ ಬೃಹತ್ ಪ್ರತಿಭಟನೆ ಮೂಲಕ ಕರಾಳ ದಿನಾಚರಣೆ ಆಚರಣೆ ಮಾಡಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ನಗರದ ಪ್ರವಾಸಿ ಮಂದಿರದಿಂದ ಕಪ್ಪು ಪಟ್ಟಿ ಧರಿಸಿ ಮೆರವಣಿಗೆ ಮೂಲಕ ಬಂದು ಕರಾಳ ದಿನಾಚರಣೆ ನಡೆಸಿದ್ದಾರೆ.ಭದ್ರಾ ಮೇಲ್ದಂಡೆ ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಹಮತದೊಂದಿಗೆ ಶೀಘ್ರದಲ್ಲಿ ಕಾಮಗಾರಿ ಮುಕ್ತಾಯಗೊಳಿಸಿ ಚಿತ್ರದುರ್ಗ ಜಿಲ್ಲೆಗೆ ನೀರು ಹರಿಸಬೇಕು. ಕೃಷಿ ಐ.ಪಿ.ಸೆಟ್‌ಗಳಿಗೆ ಆಧಾರ್ ನಂಬರ್ ಜೋಡಣೆಯನ್ನು ಕೂಡಲೇ ಕೈಬಿಡಬೇಕು. ಬೋರ್‌ವೆಲ್ ಕೊರೆಸಲು ಸರ್ಕಾರವೇ ಬೆಲೆ ನಿಗದಿ ಮಾಡಬೇಕು ಹಾಗೂ ಅಧಿಕಾರಿಗಳು, ಬೋರ್‌ವೆಲ್ ಮಾಲೀಕರು ಮತ್ತು ರೈತರು ಒಳಗೊಂಡ ಸಮಿತಿ ರಚಿಸಬೇಕು. ಕೃಷಿ ಸಾಲ ಒತ್ತಾಯ ಪೂರ್ವಕವಾಗಿ ಬ್ಯಾಂಕ್‌ಗಳು ವಸೂಲಿ ಮಾಡಬಾರದು ಎನ್.ಓ.ಸಿ.ಗೆ ಶುಲ್ಕ ಸಂಗ್ರಹಿಸಬಾರದು. ಸಾಲ ನೀಡುವಾಗ ರೈತರನ್ನು ಸಿಬಿಲ್‌ನಿಂದ ಹೊರತುಪಡಿಸಬೇಕು. ಮೈಕ್ರೋ ಪೈನಾನ್ಸ್ ಕಂಪನಿಗಳ ಹಣಕಾಸು ವ್ಯವಹಾರದ ಮೇಲೆ ಸರ್ಕಾರಗಳು ನಿಯಂತ್ರನ ವಹಿಸಬೇಕು. ರೈತರ ಜಮೀನುಗಳ ದಾರಿ ಸಮಸ್ಯೆಗಳನ್ನು ಕೂಡಲೇ ಸರಿಪಡಿಸಬೇಕು. ಪಹಣಿ ಮತ್ತು ಭೂ ದಾಖಲೆಗಳನ್ನು 5 ರೂ.ಗೆ ನೀಡಬೇಕು ಇದನ್ನು ವ್ಯಾಪಾರವಾಗಿ ಪರಿಗಣಿಸದೇ ಸೇವೆಯಾಗಿ ಪರಿಗಣಿಸಬೇಕು ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಲಾಯಿತು.

ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುವ ಮೂಲಕ ಜಿಲ್ಲಾಧಿಕಾರಿ ಕಚೇರಿ ಬಳಿ ಆಗಮಿಸಿದ್ದು ಜಿಲ್ಲಾಧಿಕಾರಿ ಕಚೇರಿ ಆವರಣಕ್ಕೆ ಬಿಡುವಂತೆ ರೈತ ಸಂಘದ ಮುಖಂಡರು ಆಗ್ರಹ ಮಾಡಿದ್ದು ಪೋಲಿಸರು ಬಿಡದಿದ್ದಾಗ ಈ ವೇಳೆಯಲ್ಲಿ ರೈತರು ಹಾಗೂ ಪೊಲೀಸರ ನಡುವೆ ಮಾತಿನ ಚಕಮಕಿ ನಡೆದು ಪ್ರತಿಭಟನಾಕಾರರನ್ನು ತಡೆಯಲು ಹಾಕಿದ್ದ ಬ್ಯಾರೀಕೇಡ್‌ಗಳನ್ನ ದಬ್ಬಿ ಕೆಳಗೆ ಬೀಳಿಸಿದ ರೈತ ಸಂಘದ ಸದಸ್ಯರು ಜಿಲ್ಲಾಧಿಕಾರಿ ಕಚೇರಿ ಆವರಣಕ್ಕೆ ನುಗ್ಗಿ ಕೂತು ಪ್ರತಿಭಟನೆ ನಡೆಸಿದ್ದು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಜಿಲ್ಲಾಧಿಕಾರಿಗೆ ಮನವಿಯನ್ನು ಸಲ್ಲಿಸಿದರು.

ಈ ಪ್ರತಿಭಟನೆಯ ನೇತೃತ್ವವನ್ನು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆಯ ರಾಜ್ಯ ಕಾರ್ಯಾಧ್ಯಕ್ಷರಾದ ಈಚಘಟ್ಟದ ಸಿದ್ದವೀರಪ್ಪ, ಮೊಳಕಾಲ್ಮೂರು ತಾ.ಅಧ್ಯಕ್ಷಮರ್ಲೇಹಳ್ಳಿರವಿಕುಮಾರ್, ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ್ ಡಿ.ಎಸ್.ಹಳ್ಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಿಜಲಿಂಗಪ್ಪ, ತಿಮ್ಮಣ್ಣ, ಈರಣ್ಣ, ರಾಜಪ್ಪ, ಬಸಪ್ಪ, ಪರದಪ್ಪ, ನಿರಂಜನ, ನಾಗರಾಜಪ್ಪ, ತಿಮ್ಮಾರೆಡ್ಡಿ, ಆಂಜನಪ್ಪ, ಶಿವಮೂರ್ತಿ ಭಾಗವಹಿಸಿದ್ದರು.

## ವಿರಾಟ್ ಹಿಂದೂ ಗಣಪತಿಯ ಶೋಭಾಯಾತ್ರೆಗೆ ಹೊಸದುರ್ಗ ಸಜ್ಜು



» ಹೊಸದುರ್ಗ

ಪಟ್ಟಣದ ಕನ್ನಡ ಸಾಹಿತ್ಯ ಪರಿಷತ್ ಭವನದ ಹಿಂಭಾಗದ ಆವರಣದಲ್ಲಿ ಪ್ರತಿಷ್ಠಾಪನೆ ಮಾಡಿರುವ ವಿರಾಟ್ ಹಿಂದೂ ಮಹಾಸಾಗರ ಗಣಪತಿಯ ಬೃಹತ್ ಶೋಭಾಯಾತ್ರೆ ಗುರುವಾರ ನಡೆಯಲಿದ್ದು, ಇದರ ವಿಶೇಷವಾಗಿ ಪಟ್ಟಣದ ಮುಖ್ಯ ರಸ್ತೆಗಳಲ್ಲಿ ಕೇಸರಿ ಬಾವುಟ, ಫ್ಲೆಕ್ಸ್ ಗಳು ರಾರಾಜಿಸುತ್ತಿವೆ. ವಿರಾಟ್ ಹಿಂದೂ ಮಹಾಸಾಗರ ಗಣಪತಿ ಸೇವಾ ಟ್ರಸ್ಟ್ ವತಿಯಿಂದ ಗಣಪತಿ ಮೂರ್ತಿಯನ್ನು ಪ್ರತಿಷ್ಠಾಪಿಸಿದ್ದು, ಕಳೆದ 13 ದಿನಗಳಿಂದ ವಿಶೇಷ ಪೂಜೆ, ಪ್ರಸಾದ ವಿತರಣೆ ಮತ್ತು ನಿತ್ಯವೂ ರಾತ್ರಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆ ಯೋಜನೆ ಮಾಡಲಾಗಿತ್ತು. 12ನೇ ದಿನವಾದ ಬುಧವಾರದಂದು ಸ್ವಾಮಿಗೆ ಗಣ ಹೋಮ ಹಾಗೂ ಇನ್ನಿತರ ಪೂಜಾ ಕಾರ್ಯಗಳು ನೆರವೇರಿದವು. ಇದೇ ಸಂದರ್ಭದಲ್ಲಿ ಬಂದಂತಹ ಭಕ್ತರಿಗೆ ಅನ್ನ ಸಂತರ್ಪಣೆ ನಡೆಯಿತು.ಈ ಬಾರಿ ವಿಶೇಷವಾದ ಅಲಂಕೃತ ವಾಹನದಲ್ಲಿ ಸ್ವಾಮಿಯನ್ನು ಕೂರಿಸಿ ಪ್ರತಿಷ್ಠಾಪನಾ ಸ್ಥಳದಿಂದ ಆರಂಭವಾದ ಶೋಭಾಯಾತ್ರೆ ಅಂಬೇಡ್ಕರ್ ಸರ್ಕಲ್, ಗಾಂಧಿ ಸರ್ಕಲ್, ಬಸವೇಶ್ವರ ಸರ್ಕಲ್, ಮದಕರಿ ಸರ್ಕಲ್ ಮತ್ತು ವೀರಭದ್ರೇಶ್ವರ ಸ್ವಾಮಿ ದೇವಾಲಯದ ಮೂಲಕ ಮಠದ ಬಾವಿ ಹತ್ತಿರ ತಲುಪಲಿದೆ. ರಾತ್ರಿ 9 ಗಂಟೆ ಸುಮಾರಿಗೆ ಸ್ವಾಮಿಗೆ ಪೂಜೆ ಸಲ್ಲಿಸಿ ವಿಸರ್ಜನಕಾರ್ಯ ಮಾಡಲಾಗುವುದು. ಮೆರವಣಿಗೆಯಲ್ಲಿ 10 ರಿಂದ 15 ಸಾವಿರ ಜನರು ಸೇರುವ ನಿರೀಕ್ಷೆ ಇದೆ ಎಂದು ಸೇವಾ ಸಮಿತಿಯ ಅಧ್ಯಕ್ಷ ಪ್ರದೀಪ್ ತಿಳಿಸಿದ್ದಾರೆ.ಶೋಭಾಯಾತ್ರೆಯ ವಿಶೇಷವಾಗಿ ಒಬ್ಬರು ಅಡಿಷನಲ್ ಎಸ್ಪಿ, ಒಬ್ಬರು ಡಿವೈಎಸ್ಪಿ, 4 ಸಿಪಿಐ, 12 ಪಿಎ□□□, 250 ಪೊಲೀಸ್ ಸಿಬ್ಬಂದಿ, ಒಂದು ಕೆ ಎಸ್ ಆರ್ ಪಿ, 4 ವಿಶೇಷ ಪೊಲೀಸ್ ಪಡೆಗಳನ್ನು ನಿಯೋಜನೆ ಮಾಡಲಾಗಿದೆ ಎಂದು ಪೊಲೀಸ್ ಇನ್ಸ್ಪೆಕ್ಟರ್ ತಿಮ್ಮಣ್ಣ ಮಾಹಿತಿ ನೀಡಿದ್ದಾರೆ.

# ಜಿಲ್ಲಾಸ್ಪತ್ರೆಯಲ್ಲಿ 20 ರಂದು ಕ್ಯಾನ್ಸರ್ ಉಚಿತ ತಪಾಸಣೆ ಶಿಬಿರ

» ಚಿತ್ರದುರ್ಗ




ಜಿಲ್ಲಾ ಆಸ್ಪತ್ರೆ ಹಾಗೂ ದಾವಣಗೆರೆ ವಿಶ್ವಾರಾಧ್ಯ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ ಸಹಯೋಗದಲ್ಲಿ ಸೆ.20 ರಂದು ಜಿಲ್ಲಾ ಆಸ್ಪತ್ರೆ ಬಿ.ಸಿ.ರಾಯ್ ಸಭಾಂಗಣದಲ್ಲಿ ಉಚಿತ ಕ್ಯಾನ್ಸರ್ ತಪಾಸಣೆ ಶಿಬಿರ ಏರ್ಪಡಿಸಲಾಗಿದೆ ಎಂದು ವಿಶ್ವಾರಾಧ್ಯ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆಯ ವೈದ್ಯರಾದ ವಿಘ್ನೇಶ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ಇಂದಿನ ದಿನಮಾನದಲ್ಲಿ ವಿವಿಧ ರೀತಿಯ ಕ್ಯಾನ್ಸರ್‌ಗಳು ಜನರಲ್ಲಿ ಕಂಡು ಬರುತ್ತಿವೆ. ಇದರ ನಿವಾರಣೆಗೆ ಅಧುನಿಕ ತಂತ್ರಜ್ಞಾನವೂ ಸಹಾ ನೆರವಾಗಿದೆ, ಧೀರ್ಘಕಾಲ ಮಾಯದ ಹುಣ್ಣು, ಗಡ್ಡೆಯ ತ್ವರಿತ ಬೆಳವಣಿಗೆ, ಧ್ವನಿಯ ಬದಲಾವಣೆ, ನುಂಗಲು ತೊಂದರೆ, ಮುಟ್ಟು ನಿಂತ ಮೇಲು ಪುನಃ ಅನಿಯಮಿತ ಮುಟ್ಟಾಗುವುದು, ಬಿಳಿಯ ಮುಟ್ಟು ಹೋಗುತ್ತಿರುವುದು ಸೇರಿದಂತೆ ವಿವಿಧ ರೀತಿಯ ಲಕ್ಷಣಗಳಿಂದ ಕ್ಯಾನ್ಸರ್ ಉಂಟಾಗಬಹುದಾಗಿದೆ. ನಮ್ಮಲ್ಲಿ ಆಧುನಿಕವಾದ ತಂತ್ರಜ್ಞಾನವನ್ನು ಬಳಕೆ ಮಾಡಿಕೊಂಡು ರೋಗವನ್ನು ತಡೆಯಬಹುದಾಗಿದೆ ಎಂದರು.

ಚಿತ್ರದುರ್ಗದಲ್ಲಿ ಸೆ. 20 ರಂದು ಜಿಲ್ಲಾ ಆಸ್ಪತ್ರೆಯ ಬಿ.ಸಿ.ರಾಯ್ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆಯಿಂದ 3 ಗಂಟೆಯವರೆಗೂ ತಪಾಸಣೆ ನಡೆಸಲಾಗುವುದು. ಚಿತ್ರದುರ್ಗದ ಜಿಲಾ ಆಸ್ಪತ್ರೆಯಲ್ಲಿ ಪ್ರಾರಂಭಿಕವಾದ ತಪಾಸಣೆಯನ್ನು ಮಾಡಲಾಗುವುದು, ತದ ನಂತರ ಹೆಚ್ಚಿನ ಚಿಕಿತ್ಸೆಗಾಗಿ ವಿಶ್ವಾರಾಧ್ಯ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆಗೆ ಕಳುಹಿಸಲಾಗುವುದು ಸಾರ್ವಜನಿಕರು ಈ ಶಿಬಿರದ ಸದುಪಯೋಗ ಪಡಿಸುಕೊಳ್ಳುವಂತೆ ಮನವಿ ಮಾಡಿದರು. ನೊಂದಣಿಗಾಗಿ ಮೊಬೈಲ್ ಸಂಖ್ಯೆ 9844458881 ಹಾಗೂ 974255516 ಸಂಪರ್ಕಿಸಬಹುದು. ಗೋಷ್ಟಿಯಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ. ಶಿಬಿರ ಸಂಚಾಲಕರಾದ ರವೀಂದ್ರ ರಾಘವೇಂದ್ರ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಸ್ವಚ್ಛತೆಯೇ ಸೇವೆ 2024 ಅಭಿಯಾನ ಆರಂಭ

» ಚಿತ್ರದುರ್ಗ





ಚಿತ್ರದುರ್ಗದ ವೇದಾಂತ ಐರನ್ ಓರ್ ಕರ್ನಾಟಕ (ಐಓಕೆ) ಸಂಸ್ಥೆಯು ಭಾರತ ಸರ್ಕಾರದ ಸ್ವಚ್ಛ ಭಾರತ್ ಮಿಷನ್ (ಎಸ್ ಬಿ ಎಂ) ಸ್ಫೂರ್ತಿಯಿಂದ ರಾಷ್ಟ್ರಾದ್ಯಂತ ಸ್ವಚ್ಛತೆಯೇ ಸೇವೆ ಎಂಬ ಅಭಿಯಾನ ಆರಂಭಿಸಿದೆ. ಆ ಅಭಿಯಾನದ ಭಾಗವಾಗಿ ಸ್ವಚ್ಛತಾ ಯೋಜನೆಗಳ ಸರಣಿಯನ್ನು ಪ್ರಾರಂಭಿಸುತ್ತಿದೆ. ಸ್ವಚ್ಛತೆಯೇ ಸೇವೆ ಎಂಬ ಅಭಿಯಾನವು ಸೆ 14ರಂದು ಪ್ರಾರಂಭವಾಗಿ ಅಕ್ಟೋಬರ್ 2ರಂದು ಮುಕ್ತಾಯಗೊಳ್ಳಲಿದೆ. ಈ ಅಭಿಯಾನವು ಸ್ವಚ್ಛತೆ, ಪರಿಸರ ರಕ್ಷಣೆ ಮತ್ತು ಸುಸ್ಥಿರ ಜೀವನದ ಪ್ರಾಮುಖ್ಯತೆಯ ಕುರಿತು ಅರಿವು ಮೂಡಿಸುವ ಉದ್ದೇಶ ಹೊಂದಿದೆ.

'ಸ್ವಭಾವ ಸ್ವಚ್ಛತೆ – ಸಂಸ್ಕಾರ ಸ್ವಚ್ಛತೆ' ಎಂಬುದು ಈ ವರ್ಷದ ಅಭಿಯಾನದ ಥೀಮ್ ಆಗಿದ್ದು, ಈ ಥೀಮ್ ಸ್ವಚ್ಛತೆ ಅನ್ನುವುದು ಕೇವಲ ದೈಹಿಕ ಕ್ರಿಯೆಯಲ್ಲ– ಬದಲಿಗೆ ನಮ್ಮ ಅಭ್ಯಾಸಗಳು (ಸ್ವಭಾವ) ಮತ್ತು ಮೌಲ್ಯಗಳಲ್ಲಿ (ಸಂಸ್ಕಾರ) ಬೇರೂರಿರುವ ಜೀವನ ವಿಧಾನವಾಗಿದೆ ಎಂಬುದನ್ನು ಸಾರುತ್ತದೆ. ಅಭಿಯಾನದ ಭಾಗವಾಗಿ ನೌಕರರು, ವ್ಯಾಪಾರ ಪಾಲುದಾರರು ಮತ್ತು ವಿದ್ಯಾರ್ಥಿಗಳಿಗೆ ವಿವಿಧ ಚಟುವಟಿಕೆಗಳು ಮತ್ತು ಸ್ಪರ್ಧೆಗಳನ್ನು ಯೋಜಿಸಲಾಗಿದ್ದು, ಈ ಉದಾತ್ತ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯ ಜನರು ಪಾಲ್ಗೊಳ್ಳಲು ಪ್ರೋತ್ಸಾಹಿಸಲಾಗುತ್ತದೆ.

ಸ್ವಚ್ಛತೆಯೇ ಸೇವೆ 2024 ಅಭಿಯಾನದ ಉದ್ಘಾಟನೆ ಮಾಡಿದ ವೇದಾಂತ ಐರನ್ ಓರ್ ಕರ್ನಾಟಕದ ಸಿಇಓ ಶ್ರೀಶೈಲ ಗೌಡ ಅವರು, "ವೇದಾಂತ ಐರನ್ ಓರ್ ಕರ್ನಾಟಕ ಸಂಸ್ಥೆಯು ಸ್ವಚ್ಛತೆ ಎಂಬುದು ಕೇವಲ ಜವಾಬ್ದಾರಿ ಮಾತ್ರವೇ ಅಲ್ಲ, ಸ್ವಚ್ಛತೆ ವೈಯಕ್ತಿಕವಾಗಿ ಮತ್ತು ಸಮಾಜವಾಗಿ ನಾವು ಯಾರು ಎಂಬುದನ್ನು ತಿಳಿಸಿಕೊಡುತ್ತದೆ ಎಂದು ನಾವು ನಂಬಿದ್ದೇವೆ. 'ಸ್ವಭಾವ ಸ್ವಚ್ಛತೆ – ಸಂಸ್ಕಾರ ಸ್ವಚ್ಛತೆ' ಎಂಬ ಈ ವರ್ಷದ ಥೀಮ್ ನಮ್ಮ ದೈನಂದಿನ ಜೀವನ ಮತ್ತು ಮೌಲ್ಯಗಳ ಭಾಗವಾಗಿ ಸ್ವಚ್ಛತೆ ಕಾಪಾಡಿಕೊಳ್ಳಲುಪ್ರೋತ್ಸಾಹಿಸುತ್ತದೆ.ನಾನು ಉದ್ಯೋಗಿಗಳು, ವ್ಯಾಪಾರ ಪಾಲುದಾರರು ಮತ್ತು ಸಮುದಾಯದ ಸದಸ್ಯರಲ್ಲಿ ಈ ಸ್ವಚ್ಛತೆಯೇ ಸೇವೆ 2024 ಅಭಿಯಾನದಲ್ಲಿ ಪಾಲ್ಗೊಳ್ಳಲು ಕೇಳಿಕೊಳ್ಳುತ್ತಿದ್ದೇನೆ. ಒಗ್ಗಟ್ಟಾಗಿ ನಾವು ನಮ್ಮ ಮಕ್ಕಳು ಮತ್ತು ನಮ್ಮ ಸಮಾಜಕ್ಕೆ ಆರೋಗ್ಯಕರ, ಸ್ವಚ್ಛ ಭವಿಷ್ಯ ಒದಗಿಸಬಹುದಾಗಿದೆ" ಎಂದು ಹೇಳಿದರು.ಅಭಿಯಾನದ ಭಾಗವಾಗಿ ಶಾಲೆಗಳಲ್ಲಿ ಸಾಮೂಹಿಕ ಸ್ವಚ್ಛತಾ ಪ್ರತಿಜ್ಞೆ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಈ ಮೂಲಕ ಚಿಕ್ಕ ವಯಸ್ಸಿನಿಂದಲೇ ಸ್ವಚ್ಛತೆಯ ಅಭ್ಯಾಸವನ್ನು ರೂಢಿಸಲು ಪ್ರೋತ್ಸಾಹಿಸಲಾಗುತ್ತದೆ. ಅನೇಕ ಸ್ವಚ್ಛತಾ ಸ್ಪರ್ಧೆಗಳು, ಸ್ಲೋಗನ್ ಮತ್ತು ಕವನ ಬರೆಯುವ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದ್ದು, ಹೆಚ್ಚಿನ ಸಂಖ್ಯೆಯ ಮಕ್ಕಳು ಪಾಲ್ಗೊಳ್ಳುವಂತೆ ಮಾಡಲಾಗುವುದು. ಜೊತೆಗೆ ಹಸಿವು ನಿರ್ಮೂಲನೆ, ಆರೋಗ್ಯ ಮತ್ತು ಸ್ವಚ್ಛತೆ ಪಾಲನೆ ವಿಚಾರದಲ್ಲಿ ಅರಿವು ಮೂಡಿಸಲು ಸ್ವಚ್ಛತಾ ವಾಕಥಾನ್ ಆಯೋಜಿಸಲಾಗುವುದು. ವೇದಾಂತ ಐರನ್‌ಓರ್‌ಕರ್ನಾಟಕಆಯೋಜಿಸುತ್ತಿರುವ ಸ್ವಚ್ಛತೆಯೇ ಸೇವೆ 2024 ಅಭಿಯಾನವು ಸಂಸ್ಥೆಯ ಸಾಮಾಜಿಕ ಜವಾಬ್ದಾರಿ, ಪರಿಸರ ಸುಸ್ಥಿರತೆ ವಿಚಾರದಲ್ಲಿನ ಬದ್ಧತೆಗೆ ಪುರಾವೆಯಾಗಿದೆ.ಮಹಾತ್ಮಗಾಂಧಿಯವರ ಜನ್ಮದಿನವಾದ ಅಕ್ಟೋಬರ್ 2ರಂದು ಸ್ವಚ್ಛ ಭಾರತ್ ಮಿಷನ್ (ಎಂಬಿಎಂ)ನ 10ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ವಾಕಥಾನ್ ಮತ್ತು ಸ್ವಚ್ಛತಾ ಅಭಿಯಾನ ನಡೆಸುವ ಮೂಲಕ ಈ ಕಾರ್ಯಕ್ರಮ ಮುಕ್ತಾಯಗೊಳ್ಳಲಿದೆ.

## ಫಾಸ್ಟ್ ನ್ಯೂಸ್

### ಬಾಲೇನಹಳ್ಳಿ, ಸಾಣಿ-ಕೆರೆ, ರಾಮಜೋಗಿಹಳ್ಳಿ, ಸೋಮಗುದ್ದು ವ್ಯಾಪ್ತಿಯಲ್ಲಿ ಇಂದು ವಿದ್ಯುತ್ ಬಂದ್.

» **ಚಳ್ಳಕೆರೆ**

ನಗರದ ಬೆಂಗಳೂರು ವಿದ್ಯುತ್ ಕಂಪನಿ ಉಪವಿಭಾಗ ವ್ಯಾಪ್ತಿಯಲ್ಲಿ 66/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರಗಳಾದ ಬಾಲೇನಹಳ್ಳಿ ಮತ್ತು ಸಾಣಿಕೆರೆ ವ್ಯಾಪ್ತಿಯಲ್ಲಿ ಎರಡನೇ ವರ್ಷದ ತ್ರೈಮಾಸಿಕ ಕಾಮಗಾರಿ ನಿರ್ವಹಣೆ ಹಿನ್ನೆಲೆಯಲ್ಲಿ ಸೆ.19ರ ಗುರುವಾರ ಬೆಳಗ್ಗೆ 10ರಿಂದ ಸಂಜೆ5ರ ತನಕ ಚಳ್ಳಕೆರೆ ತಾಲ್ಲೂಕಿನ ರಾಮಜೋಗಿಹಳ್ಳಿ, ಸೋಮಗುದ್ದು, ನನ್ನಿವಾಳ, ಸಾಣಿಕೆರೆ, ಬೆಳಗೆರೆ ಮತ್ತು ಗೋಪನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ವಿದ್ಯುತ್ ವಿತರಣೆಯನ್ನು ಸ್ಥಗಿತಗೊಳಿಸಲಾಗುವುದು ಎಂದು ಎಇಇ ಜೆ.ಶಿವಪ್ರಸಾದ ತಿಳಿಸಿದ್ದಾರೆ. ಗ್ರಾಹಕರಿಗೆ ಆಗುವ ತೊಂದರೆಗೆ ವಿಷಾದ ವ್ಯಕ್ತಪಡಿಸಿರುವ ಅವರು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಸೇರಿದಂತೆ ಇಲಾಖೆಯ ಕೆಲಸ ಕಾರ್ಯಗಳಿಗೆ ಸಾರ್ವಜನಿಕರು ಸಹಕಾರ ನೀಡುವಂತೆ ಮನವಿ ಮಾಡಿದ್ದಾರೆ.

### ವಿದ್ಯಾದಾನ ಮಾಡಿದ ಗುರುಗಳಿಗೆ ಗೌರವ ಪುಣ್ಯದ ಕೆಲಸ : ಸುರೇಶ್.



» **ಚಳ್ಳಕೆರೆ**

ಪ್ರತಿಯೊಬ್ಬ ಶಿಕ್ಷಕನ ಪರಮ ಗುರಿ ಉತ್ತಮ ಬೋಧನೆ ನೀಡಿ, ವಿದ್ಯಾರ್ಥಿಗಳ ಬದುಕನ್ನು ಉಜ್ವಲಗೊಳಿಸುವುದಾಗಿದೆ. ತಂದೆ, ತಾಯಿ ಜನ್ಮನೀಡಿದ ನಂತರ ಶಾಲೆಗೆ ಸೇರಿಸಿ ಮುಂದಿನ ಭವಿಷ್ಯದ ಬಗ್ಗೆ ಚಿಂತನೆ ಮಾಡುವುದು ಸ್ವಾಭಾವಿಕ. ಆದರೆ, ಶಿಕ್ಷಕನ ಜವಾಬ್ದಾರಿ ಅತಿಹೆಚ್ಚು. ವಿದ್ಯಾರ್ಥಿಯ ಆಸಕ್ತಿ, ನಿರಾಶಕ್ತಿಗಳನ್ನು ಗ್ರಹಿಸಿ ಅವರಿಗೆ ಉತ್ತಮ ಮಾರ್ಗತೋರುವ ಶಿಕ್ಷಕನ ಕಾರ್ಯ ಪುಣ್ಯದ ಕಾರ್ಯವೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ತಾಲ್ಲೂಕಿನ ತಳಕು ಶ್ರೀಮತಿಗೌರಮ್ಮತಿಪ್ಪೇಸ್ವಾಮಿ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ 1989-90ನೇ ಸಾಲಿನ ಎಸ್ಎಸ್ಎಲ್ಸಿ ವಿದ್ಯಾರ್ಥಿಗಳ ಸ್ನೇಹಮಿಲನದ ವತಿಯಿಂದ ತಮ್ಮ ಭವಿಷ್ಯದ ಬದುಕನ್ನು ಬೆಳಗಿದ ಗುರುಗಳಿಗೆ ಗುರುವಂದನಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಗುರುಗಳ ಸಾಧನೆಯನ್ನು ಯಾವುದೇ ಅಳತೆಗೋಲಿನಿಂದ ಅಳಿಯಲು ಸಾಧ್ಯವಿಲ್ಲ. ಆದರೆ, ತಾವು ಶಿಕ್ಷಣ ಪಡೆದು ಉತ್ತಮ ಬದುಕು ನಡೆಸುವ ವಿದ್ಯಾರ್ಥಿಗಳ ವೃಂದ ಸ್ನೇಹ ಮಿಲನದ ಹೆಸರಿನಲ್ಲಿ ಅವರಿಗೆ ಮಾರ್ಗದರ್ಶನ ನೀಡಿದ ಗುರುಗಳನ್ನು ಸನ್ಮಾನಿಸಿ, ತಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿದ್ಧಾರೆ. ಇಂತಹ ಕಾರ್ಯಗಳಿಂದ ಎಲ್ಲರಲ್ಲೂ ಆತ್ಮವಿಶ್ವಾಸ ಹೆಚ್ಚುತ್ತದೆ ಎಂದರು. ಈ ಸಂದರ್ಭದಲ್ಲಿ ಇದೇ ಶಾಲೆಯಲ್ಲಿ ಶಿಕ್ಷಣ ನೀಡಿದ ಗುರುಗಳಾದ ಜಿ.ಕೃಷ್ಣಮೂರ್ತಿ, ಕೆ.ಲಿಂಗಪ್ಪರೆಡ್ಡಿ, ಎನ್.ಕೃಷ್ಣಮೂರ್ತಿ, ಎನ್.ಕೆ.ಭೀಮರಾವ್ ಇವರನ್ನು ಸನ್ಮಾನಿಸಿ ಶಿಷ್ಯವೃಂದ ನೆನಪಿನ ಕಾಣಿಕೆಯನ್ನು ಸಹ ನೀಡಿದರು. ವಿಶೇಷವೆಂದರೆ ತಮಗೆ ವಿದ್ಯಾದಾನ ಮಾಡಿದ ಗುರುಗಳನ್ನು ಬೆಳ್ಳಿ ರಥದಲ್ಲಿ ಕೂರಿಸಿ ಇಡೀ ಗ್ರಾಮದಲ್ಲಿ ಮೆರವಣಿಗೆ ಮಾಡುವ ಮೂಲಕ ತಮ್ಮ ಪ್ರೀತಿ, ವಿಶ್ವಾಸವನ್ನು ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಟಿಎಟಿ ಕುಮಾರ್ ವಹಿಸಿದ್ದರು. ಎಸ್ಡಿಎಂಸಿ ಅಧ್ಯಕ್ಷ ತಿಪ್ಪೇಸ್ವಾಮಿ, ಹಳೇವಿದ್ಯಾರ್ಥಿಗಳಾದ ಎನ್. ಮಾರಣ್ಣ, ಟಿ.ರುದ್ರಮುನಿ, ರಫೀ, ಕಾಟಯ್ಯ, ಕೆ.ಶ್ರೀನಿವಾಸ್, ಎಸ್.ಓ.ಓಬಣ್ಣ, ಕಾಟಂಲಿಂಗಯ್ಯ, ಎಂ.ಆರ್.ರೇವಣ್ಣ, ತಿಪ್ಪೇಸ್ವಾಮಿ, ಜಗದೀಶ್, ಪ್ರಕಾಶ್, ನರೇಂದ್ರಚಾರಿ, ಟಿ.ಎಂ.ವಿಜಯಕಲಾ, ಬಸಪ್ಪ, ಶ್ಯಾಮಲ, ಗೌರಮ್ಮ, ಎಸ್.ಆರ್.ನಾಗಮಣಿ, ಜಿ.ಯಶೋಧ, ಲೀಲಾವತಿ, ಹಯಾತ್‌ಬಿ, ವಾಣಿ, ಫಾತೀಮನೂರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

### ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಸೆ.25 ಕೊನೆ ದಿನ

» **ದಾವಣಗೆರೆ**

ಗ್ಯಾರಂಟಿ ಯೋಜನೆ ಯುವನಿಧಿಯಡಿ ಡಿ.ಬಿ.ಟಿ. ಮೂಲಕ ಹಣ ಸಂದಾಯ ಮಾಡಲಾಗುತ್ತಿದ್ದು, ಯುವನಿಧಿ ಹಣ ಸಂದಾಯವಾಗಲು ಸೆ.25 ರೊಳಗಾಗಿ ಯುವನಿಧಿ ಯೋಜನೆಯ ಫಲಾನುಭವಿಗಳು ಮೊಬೈಲ್ ಮೂಲಕ ಅಥವಾ ದಾವಣಗೆರೆ ಒನ್, ಗ್ರಾಮ ಒನ್ ಸೆಂಟ□□ಗಳಲ್ಲಿ ಸೆ.25 ರೊಳಗೆ ಸ್ವಯಂ ದೃಢೀಕರಣ ಮಾಡಿಕೊಳ್ಳಬಹುದು. ಯುವನಿಧಿ ನೋಂದಣಿಯಲ್ಲಾಗುವ ಸಮಸ್ಯೆಗಳು ಹಾಗೂ ಮಾಹಿತಿಗಾಗಿ ರಾಜ್ಯ ಸಹಾಯವಾಣಿ ಸಂಖ್ಯೆ: 18005999918 ಅಥವಾ ಜಿಲ್ಲಾ ಸಹಾಯವಾಣಿ ಸಂಖ್ಯೆ: 6364698504 ನ್ನು ಸಂಪರ್ಕಿಸಲು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ.ಡಿ.ತಿಳಿಸಿದ್ದಾರೆ.

## ಸಿರಿಗೆರೆಯಲ್ಲಿ ಸೆ.20 ರಿಂದ 24ರ ವರೆಗೆ 5 ದಿನ

# ಲಿಂ.ಶಿವಕುಮಾರ ಶ್ರೀ ಶ್ರದ್ಧಾಂಜಲಿ ಸಮಾರಂಭ

■ **ಚಿತ್ರದುರ್ಗ**

ಸಿರಿಗೆರೆ ಬೃಹನ್ಮಠದ ಹಿರಿಯ ಲಿಂ. ಶ್ರೀಗಳಾದ ಶಿವಕುಮಾರ ಶಿವಾಚಾರ್ಯ ಸ್ವಾಮೀಜಿಯವರ 32ನೇ ಶ್ರದ್ಧಾಂಜಲಿ ಸಮಾರಂಭವು ಸೆ.20 ರಿಂದ 24ರವರೆಗೆ ಸಿರಿಗೆರೆಯ ಗುರುಶಾಂತೇಶ್ವರ ದಾಸೋಹ ಭವನದಲ್ಲಿ ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಅದ್ದೂರಿಯಾಗಿ ಜರುಗಲಿದ್ದು, ಸಿದ್ಧತೆಗಳು ಭರದಿಂದ ಸಾಗಿವೆ ಎಂದು ಸಿರಿಗೆರಡ ಶ್ರೀ ತರಳಬಾಳು ಜಗದ್ಗುರು ಬೃಹನ್ಮಠದ ಕಾರ್ಯದರ್ಶಿ ಜಿ.ಆರ್. ಓಂಕಾರಪ್ಪ ತಿಳಿಸಿದರು.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ. 20 ಶುಕ್ರವಾರ ಸಂಜೆ 6 ಗಂಟೆಗೆ ನಡೆಯುವ ಸಭಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಸಂಸದ ಡಾ.ಪ್ರಭಾ ಮಲ್ಲಿಕಾರ್ಜುನ್, ಶಾಸಕ ಕೆ.ಎಸ್. ಬಸವಂತಪ್ಪ, ವಿಧಾನಪರಿಷತ್ ಸದಸ್ಯ ಡಾ.ಧನಂಜಯ ಸರ್ಜಿ ಹಾಗೂ ಅತಿಥಿಗಳಾಗಿ ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಶಿವಮೊಗ್ಗ ಹಾಲುಒಕ್ಕೂಟಸಂಘದ ಅಧ್ಯಕ್ಷರಾದ ವಿದ್ಯಾಧರ್, ಹಾಸ್ಯ ಸಾಹಿತಿಗಳಾದ ಎಂ.ಎಸ್.ನರಸಿಂಹಮೂರ್ತಿ ಆಗಮಿಸಲಿದ್ದು, ಬಸವರಾಜ ಗಿರಿಯಾಪುರ ಉಪನ್ಯಾಸ ನೀಡಲಿದ್ದು, ಅಕ್ಕನ ಬಳಗದಿಂದ ವಚನಗೀತೆ, ಶಾಲಾ ವಿದ್ಯಾರ್ಥಿಗಳಿಂದ ನೃತ್ಯ ಪ್ರದರ್ಶನ ಜೊತೆಗೆ ತರಳಬಾಳು ಕಲಾ ಸಂಘದಿಂದ ಭರತನಾಟ್ಯ ಕಾರ್ಯಕ್ರಮಗಳು ಜರುಗಲಿದೆ.

ಸೆ.21ರ ಸಂಜೆ 6 ಗಂಟೆಗೆ ನಡೆಯುವ ಸಭಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಚಿತ್ರದುರ್ಗ ಲೋಕಸಭಾ ಸದಸ್ಯರಾದ ಗೋವಿಂದ ಕಾರಜೋಳ, ಶಾಸಕ ಎಚ್.ಡಿ.ತಮ್ಮಯ್ಯ, ಮಾಜಿ ಸಚಿವ ಹೆಚ್. ಆಂಜನೇಯ, ಅತಿಥಿಗಳಾಗಿ ದಾವಣಗೆರೆಯ ಜಿಲ್ಲಾಧಿಕಾರಿ ಡಿ.ಎಂ.ಗಂಗಾಧರಸ್ವಾಮಿ, ಚಿತ್ರದುರ್ಗ ಜಿಲ್ಲಾ ರಕ್ಷಣಾಧಿಕಾರಿಗಳಾದ ರಂಜಿ□□ಕುಮಾ□□ಮೀನಾ, ಮಾಜಿ ಶಾಸಕ ಬೆಳ್ಳಿಪ್ರಕಾಶ್ ಆಗಮಿಸಲಿದ್ದು, ಸುಮತಿ ಜಯಪ್ಪರವರು ಉಪನ್ಯಾಸ ನೀಡಲಿದ್ದು, ವಚನಗೀತೆ, ನೃತ್ಯ ಪ್ರದರ್ಶನ, ಮೂಡಲಪಾಯ ಯಕ್ಷಗಾನ ಕಾರ್ಯಕ್ರಮಗಳು ಜರುಗಲಿವೆ.



ಸೆ. 22ರ ಭಾನುವಾರ ಸಂಜೆ 6 ಗಂಟೆಗೆ ನಡೆಯುವ ಸಭಾ ಕಾರ್ಯಕ್ರಮದಲ್ಲಿ ಶಾಸಕ ಡಾ.ಎಂ.ಚಂದ್ರಪ್ಪ, ಶಾಸಕರಾದ ಶಿವಗಂಗಾಬಸವರಾಜ್, ಬಿ.ದೇವೇಂದ್ರಪ್ಪ, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ಅಧ್ಯಕ್ಷರಾದ ಶುಭಧನಂಜಯ್, ರಂಗಕರ್ಮಿಗಳಾದಎಸ್.ಎನ್.ಸೇತುರಾಂ, ಕರ್ನಾಟಕ ಜನಪದ ಅಕಾಡೆಮಿ ಅಧ್ಯಕ್ಷರಾದ ಗೊಲ್ಲಹಳ್ಳಿ ಶಿವಪ್ರಸಾದ್, ವೈ. ವೃಷಬೇಂದ್ರಪ್ಪ ಉಪನ್ಯಾಸ ನೀಡಲಿದ್ದು, ಹಿಂದುಸ್ತಾನಿ ಗಾಯಕರಾದ ಯಶವಂತ ಬಡೀಗೇರ ಅವರಿಂದ ವಚನಗಾಯನ, ತರಳಬಾಳು ಕಲಾಸಂಘದಿಂದ ಮಲ್ಲಿಹಗ್ಗ ಮತ್ತು ಯಕ್ಷಗಾನ ಪ್ರಸ್ತುತಿ ಜರುಗಲಿವೆ.




ಸೆ. 23ರ ಸೋಮವಾರ ಸಂಜೆ 6 ಗಂಟೆಗೆ ನಡೆಯುವ ಸಭಾ ಕಾರ್ಯಕ್ರಮದಲ್ಲಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಶಾಸಕರಾದ ಬಿ.ವೈ.ವಿಜಯೇಂದ್ರ, ಡಿ.ಜೆ.ಶಾಂತನಗೌಡ, ಅಂತರಾಷ್ಟ್ರೀಯ ಕೃಷಿ ವಿಜ್ಞಾನಿ ಪ್ರಶಸ್ತಿ ಪುರಸ್ಕೃತ ಡಾ.ಎಸ್.ಎಲ್.ಕೃಷ್ಣಮೂರ್ತಿ, ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷರಾದ ನಾಗರಾಜ ಮೂರ್ತಿ, ಕುಲಪತಿಗಳಾದ ಸೂರ್ಯಪ್ರಸಾದ್ ಆಗಮಿಸಲಿದ್ದು, ನಿವೃತ್ತ ಪ್ರಾಚಾರ್ಯರಾದ ಡಾ.ನಾ.ಲೋಕೇಶ್ ಒಡೆಯರ್ ಉಪನ್ಯಾಸ ನೀಡಲಿದ್ದು, ಸಿರಿಗೆರೆಯ ತರಳಬಾಳು ಕಲಾಸಂಘದಿಂದ ಮಲ್ಲಕಂಬ ಮತ್ತು ಶರಣಸಂಕುಲ ನೃತ್ಯ ರೂಪಕಗಳು ಜರುಗಲಿವೆ.

ಸೆ.24ರ ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿಯವರು ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಲಿದ್ದು, ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಾಧೀಶರಾದ ಶಿವರಾಜ್.ವಿ. ಪಾಟೀಲ್ ಅಧ್ಯಕ್ಷತೆ ವಹಿಸಲಿದ್ದಾರೆ. ಶ್ರೀಮಾನ್ ಸಾಧುಸಧರ್ಮ ವೀರಶೈವ ಸಂಘದ ಅಧ್ಯಕ್ಷರಾದ ಹೆಚ್.ಆರ್.ಬಸವರಾಜಪ್ಪ ಗುರುವಂದನೆ ನಡೆಸಿಕೊಡಲಿದ್ದು, ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಗೃಹಸಚಿವ ಡಾ.ಜಿ.ಪರಮೇಶ್ವರ್, ಸಚಿವ ಎಂ.ಬಿ.ಪಾಟೀಲ್, ಸಚಿವರಾದ ಈಶ್ವರ್.ಬಿ.ಖಂಡ್ರೆ, ಮಾಜಿ ಕೇಂದ್ರಸಚಿವ ಜಿ.ಎಂ.ಸಿದ್ದೇಶ್ವರ, ಶಂಕರ.ಎಂ.ಬಿದರಿ ಆಗಮಿಸಲಿದ್ದು, ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ರಾಜೇಶ್ ಅಮ್ಮಿನಭಾವಿ, ಶಾಸಕ ಯು.ಬಿ.ಬಣಕಾರ ಆಗಮಿಸಲಿದ್ದ, ತೋಟಪ್ಪ ಉತ್ತಂಗಿ ಅವರಿಂದ ವಚನಗೀತೆ ಹಾಗೂ ತರಳಬಾಳು ಕಲಾಸಂಘದಿಂದ ವಚನ ನೃತ್ಯಗಳು ಜರುಗಲಿವೆ.

ಕೃತಿಗಳ ಲೋಕಾರ್ಪಣೆ : ತರಳಬಾಳು ಪ್ರಕಾಶನದ ಸಾಹಿತ್ಯ ಸಿರಿ ಮಾಲಿಕೆಯ ಕೃತಿಗಳಾದ ಶ್ರೀ ಶಿವಕುಮಾರ ಶಿವಾಚಾರ್ಯ ಸ್ವಾಮೀಜಿಗಳ ವಿರಚಿತ ಆತ್ಮ ನಿವೇದನೆ, ಸಂಕಲ್ಪ, ಅಕ್ಕಮಹಾದೇವಿ ಕೆ ವಚನ್, ಅಲ್ಲಮ್ಮಪ್ರಭು ಕೆ ವಚನ್ ಕೃತಿಗಳು ಲೋಕಾರ್ಪಣೆಗೊಳ್ಳಲಿವೆ.

ದಾಸೋಹಕ್ಕೆ ಭಕ್ತಿ ಸಮರ್ಪಣೆ. : ಪ್ರತಿವರ್ಷದಂತೆ ಈ ವರ್ಷವೂ ಸಹ ಲಿಂ. ಶ್ರೀಗಳ ಶ್ರದ್ಧಾಂಜಲಿಗೆ ಚನ್ನಗಿರಿಯ ತುಮ್ಕೋಸ್ ಅವರಿಂದ ಲಾಡು ಪ್ರಸಾದ, ನಾಗತಿಬೆಳಗಲು, ಭದ್ರಾವತಿ, ಶಿವಮೊಗ್ಗ, ಹರಿಹರ, ಹೊನ್ನಾಳಿ ಮತ್ತು ನ್ಯಾಮತಿ ತಾಲೂಕು ಶಿಷ್ಯ ಮಂಡಳಿ, ಯಲವಟ್ಟಿ, ಎಂ.ಹನುಮನಹಳ್ಳಿ ಗ್ರಾಮಸ್ಥರು, ಹಾಗೂ ಸಿರಿಗೆರೆ ಮತ್ತು ಸುತ್ತಮುತ್ತಲ ಗ್ರಾಮಾಂತರ ಶಿಷ್ಯ ಮಂಡಳಿಯವರಿಂದ ಅಕ್ಕಿ, ಬೇಳೆ, ಬೆಲ್ಲ ಮುತಾಂದ ದಾಸೋಹ ಸಾಮಗ್ರಿಗಳನ್ನು ಸಮರ್ಪಿಸಲಿದ್ದಾರೆ. ಸಿರಿಗೆರೆ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರ ಜೊತೆಗೆ ಹರಪನಹಳ್ಳಿ ತಾಲೂಕಿನ ಶಿಷ್ಯ ಮಂಡಳಿಯವರು ದಾಸೋಹ ಸೇವಕರ್ತರಾಗಿ ಸೇವೆ ಸಲ್ಲಿಸಲಿದ್ದಾರೆ.

ಸೆ.22ರ ಭಾನುವಾರ ಸಿರಿಗೆರೆಯ ಶ್ರೀ ತರಳಬಾಳು ಜಗದ್ಗುರು ಪಶು ಚಿಕಿತ್ಸಾಲಯದಲ್ಲಿ ಉಚಿತ ಪಶು ಚಿಕಿತ್ಸೆ ಜರುಗಲಿದ್ದು, 23ರ ಸೋಮವಾರ ಬೆಳಗ್ಗೆ ಐಕ್ಯಮಂಟಪದ ಆವರಣದಲ್ಲಿ ಸಾಮೂಹಿಕ ಪ್ರಾರ್ಥನೆ ಮತ್ತು ಶಿವಮಂತ್ರಲೇಖನ, 10 ಗಂಟೆಗೆ ರಕ್ತದಾನ ಮತ್ತು ಉಚಿತ ಕಣ್ಣಿನ ತಪಾಸಣೆ ಹಾಗೂ 11 ಗಂಟೆಗೆ ಶ್ರೀ ತರಳಬಾಳು ಜಗದ್ಗುರು ವಿದ್ಯಾಸಂಸ್ಥೆಯ ಹಿರಿಯ ವಿದ್ಯಾರ್ಥಿಗಳ ಹಾಗೂ ನಿವೃತ್ತ ನೌಕರರ ಸಮಾವೇಶ ಜರಗಲಿದೆ. ಸಂಜೆ 4 ಗಂಟೆಗೆ ಲಿಂ. ಶ್ರೀ ಶಿವಕುಮಾರ ಶಿವಾಚಾರ್ಯ ಸ್ವಾಮೀಜಿಯವರ ಭಾವಚಿತ್ರದ ಮೆರವಣಿಗೆಯು ಸಿರಿಗೆರೆಯ ಪ್ರಮುಖ ಬೀದಿಗಳಲ್ಲಿ ಜನಪದ ಕಲಾತಂಡಗಳೊಂದಿಗೆ ಅದ್ದೂರಿಯಾಗಿ ಜರುಗಲಿದೆ. ಸೆ.24ರ ಮಂಗಳವಾರ ಐಕ್ಯಮಂಟಪದಲ್ಲಿ ಲಿಂ. ಶಿವಕುಮಾರ ಶ್ರೀಗಳ ಕತ್ತ ಗದ್ದಿಗೆ ವಿಶೇಷ ಪೂಜೆ ಹಾಗೂ ಮಹಾರುದ್ರಾಭಿಷೇಕ, ಶ್ರೀಗಳಿಂದ ಪುಷ್ಪ ನಮನ, 10.30ಕ್ಕೆ ಶಿವ ಧ್ವಜಾರೋಹಣ ಮುಂತಾದ ಕಾರ್ಯಕ್ರಮಗಳು ಜರುಗಲಿವೆ. ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿ ಗಳವರ 32ನೇ ಶ್ರದ್ಧಾಂಜಲಿ ಸಮಾರಂಭದ ವೇದಿಕೆ. ಈ ಸಭಾ ವೇದಿಕೆಯಲ್ಲಿ ಸುಮಾರು 5000 ಜನ ಕುಳಿತುಕೊಂಡು ಸಭಾ ಕಾರ್ಯಕ್ರಮಗಳನ್ನು ವೀಕ್ಷಿಸಬಹುದು.

ಪ್ರಸಾದದ ವ್ಯವಸ್ಥೆಯಲ್ಲಿ ಸುಮಾರು ನಾಲ್ಕು ಸಾವಿರ ಜನ ಒಂದೇ ಬಾರಿ ಕುಳಿತುಕೊಂಡು ಪ್ರಸಾದ ವ್ಯವಸ್ಥೆ ಮಾಡಬಹುದು. ಇಪ್ಪತ್ತನೇ ತಾರೀಕಿನಿಂದ 25 ರ ತನಕ ತಿಂಡಿ ಪ್ರಸಾದ ವ್ಯವಸ್ಥೆ ಇರುತ್ತದೆ. ಪ್ರಸಾದದಲ್ಲಿ ಪಲ್ಯ. ಅನ್ನ ಸಾಂಬಾರು ಪಾಯಸ. ಮಜ್ಜಿಗೆ ವ್ಯವಸ್ಥೆ ಇದ್ದು. 23 ಮತ್ತು 24ರಂದು ಲಾಡು ಜುಲಾಬಿಯ ವ್ಯವಸ್ಥೆ ಇರುತ್ತದೆ.

## ಅಕ್ರಮ ಅದಿರು, ಕಲ್ಲು, ಜಲ್ಲಿ, ಮರಳು ಸಾಗಿಸುವ ಲಾರಿಗಳ ಮೇಲೆ ಜಿಪಿಎಸ್ ನಿಗಾ ಯಶಸ್ವಿ

» **ಬೆಂಗಳೂರು**

ಅಕ್ರಮ ಖನಿಜ ಸೇರಿದಂರೆ ಕಲ್ಲು, ಜಲ್ಲಿ, ಮತ್ತು ಮರಳು ಸಾಗಣೆ ಮಾಡುತ್ತಿದ್ದ ಲಾರಿಗಳ ಮೇಲೆ ನಿಗಾವಹಿಸಲಾಗಿದ್ದು, ಸರ್ಕಾರಕ್ಕೆ ಆಗುತ್ತಿದ್ದ ನಷ್ಟವನ್ನು ತಪ್ಪಿಸಲಾಗುತ್ತಿದೆ ಎಂದು ಸಚಿವರಾದ ಎ□□ಎಸ್ ಮಲ್ಲಿಕಾರ್ಜುನ ತಿಳಿಸಿದರು. ಒನ್ ಸ್ಟೇಟ್ - ಒನ್ ಜಿಪಿಎಸ್ ಯೋಜನೆಯಿಂದ ನಿಯಮ ಉಲ್ಲಂಘಟನೆ ಮಾಡುವಂತ ಲಾರಿಗಳ ಮೇಲೆ ದಂಡ ವಿಧಿಸಲಾಗುತ್ತಿದೆ ಎಂದರು.

ಈ ಯೋಜನೆ ಉದ್ದೇಶ ಲಾರಿ ಮಾಲೀಕರು, ಗಣಿ ಮಾಲೀಕರು ಮತ್ತು ಗ್ರಾಹಕರಿಗೆ ಆಗುತ್ತಿದ್ದ ಮೋಸ ತಡೆಯಲು ಈ ಯೋಜನೆ ಜಾರಿಗೆ ತಂದಿದ್ದು ಯಶಸ್ವಿಯಾಗಿದೆ ಎಂದರು. ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಎಲ್ಲಾ ಮಾದರಿ ಖನಿಜ- ಉಪ ಖನಿಜ ಸಾಗಿಸುವ ಸಾರಿಗಳ ಮೇಲೆ ನಿಗಾ ವಹಿಸಲು ಜಿಪಿಎಸ್ ಅಳವಡಿಸುವ ಯೋಜನೆ ಜಾರಿಗೆ ತಂದಿತ್ತು.

ಇದರಿಂದ ಸಾಕಷ್ಟು ಪ್ರಯೋಜನವಾಗಿದ್ದು, ಸರ್ಕಾರಕ್ಕೂ ಇದರಿಂದ ಲಾಭವಾಗಿದೆ ಎಂದರು, ಸೋರಿಕೆಯಾಗುತ್ತಿದ್ದ ಆದಾಯಕ್ಕೆ ಕಡಿವಾಣ ಬಿದ್ದಿದೆ ಎಂದರು.

ಇನ್ನೂ ಒಂದು ಪರವಾನಗೆ ತೆಗೆದುಕೊಂಡು ಹತ್ತಾರು ಲೋಡ್ ನ್ನು ಅಕ್ರಮ ಸಾಗಿಸುತ್ತಿದ್ದರು,



ಇದರಿಂದ ಲಾರೀ ಮಾಲೀಕರು ಮತ್ತು ಗಣಿ ಮಾಲೀಕರಿಗೂ ಕೆಲವೊಮ್ಮ ನಷ್ಟವಾಗುತ್ತಿದ್ದು, ಇದೀಗ ಜಿಪಿಎಸ್ ಅಲವಡಿಕೆಯಿಂದ ಇಲ್ಲಿ ಯಾರಿಗೂ ಮೋಸ ಆಗುವುದಿಲ್ಲ ಎಂದರು.

ಲಾರಿ ಮಾಲೀಕರು ಎಲ್ಲೋ ಇರುತ್ತಾರೆ ಯಾವುದೇ ಏಜೆನ್ಸಿ ಅಥವಾ ಕಂಪನಿ ಮೂಲಕ ಟ್ರಾ□□□□ಪೋರ್ಟ್ ಮಾಡುತ್ತಿದ್ದರು ಇದೀಗ ಜಿಪಿಎಸ್ ಅಳವಡಿಕೆಯಿಂದ ಲಾರಿ ಮಾಲೀಕರು ಸೇರಿದಂತೆ ಯಾರಿಗೂ ಮೋಸ ಆಗುವುದಿಲ್ಲ ಎಂದರು. ಇದರಿಂದ ಪಾರದರ್ಶಕ ಆದಳಿತ ಮತ್ತು ಗ್ರಾಹಕರಿಗೂ ಅನುಕೂಲ ಕಳ್ಳದಂಧೆಗೆ ಕಡಿವಾಣ ಬಿದ್ದಿದೆ ಎಂದು ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ತಿಳಿಸಿದರು. ಗಣಿಉದ್ಯಮಿಗಳು, ಲಾರಿ ಮಾಲೀಕರು ಮತ್ತು ಗ್ರಾಹಕರಿಗೂ ಇದರಿಂದ ಯಾವುದೇ ಅನ್ಯಾಯವಾಗದಂತೆ ಕ್ರಮವಹಿಸುತ್ತಿದ್ದು, ಸರ್ಕಾರಕ್ಕೂ ಇದರಿಂದ ಆದಾಯ ಕೂಡ ಹೆಚ್ಚಾಗಲಿದೆ ಎಂದರು.

ಅಧಿಕಾರಿಗಳು ಸಹ ಈ ಬಗ್ಗೆ ಹೆಚ್ಚು ಗಮನಹರಿಸಿ ಕೆಲಸ ಮಾಡುವಂತೆ ಸೂಚಿಸಿದರು. ಈ ವೇಲೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಾವೇರಿ-2 ತಂತ್ರಾಂಶಕ್ಕೆ ಸಂಯೋಜನೆ ಸೆ. 9 ರಿಂದ ದಾವಣಗೆರೆ ಜಿಲ್ಲೆಯಲ್ಲಿ ಜಾರಿ

» **ದಾವಣಗೆರೆ**

ಜಿಲ್ಲೆಯಲ್ಲಿ ಸೆಪ್ಟೆಂಬರ್ 9 ರಿಂದ ಕಾವೇರಿ-2 ಇ-ಆಸ್ತಿ ತಂತ್ರಾಂಶ ಜಾರಿಗೊಂಡಿದ್ದು, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ಥಿರಾಸ್ತಿಗಳನ್ನು ಇ-ಆಸ್ತಿ ತಂತ್ರಾಂಶ ಕಾವೇರಿ-2 ನೊಂದಿಗೆ ಸಂಯೋಜನೆಗೊಂಡಿದ್ದು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಆಸ್ತಿ ನೊಂದಾಯಿಸಲು ಆಸ್ತಿಯ ಮಾಹಿತಿಯನ್ನು ಕಡ್ಡಾಯವಾಗಿ ಇ-ಆಸ್ತಿ ತಂತ್ರಾಂಶದಿಂದ ಪಡೆಯಬೇಕೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಕೃಷಿ ಜಮೀನಿನ ನೋಂದಣಿಗೆ ಭೂಮಿ ತಂತ್ರಾಂಶದೊಂದಿಗೆ 2006 ರಿಂದಲೇ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲಾಗಿದೆ. ಜಮೀನಿನ ಸರ್ವೆನಕ್ಷೆ 11 ಇ-ಸ್ಕೇಚ್ ಮೋಜಣಿ ತಂತ್ರಾಂಶದೊಂದಿಗೆ ಹಾಗೂ ಕಾವೇರಿ ತಂತ್ರಾಂಶವನ್ನು ಅಕ್ಟೋಬರ್ 5, 2016 ರಿಂದ ಸಂಯೋಜನೆ ಮಾಡಲಾಗಿದೆ. ಅಲ್ಲದೇ ಗ್ರಾಪಂ ವ್ಯಾಪ್ತಿಯ ಕೃಷಿಯೇತರ ಸ್ವತ್ತುಗಳ ದಸ್ತಾವೇಜುಗಳ ನೋಂದಣಿಗಾಗಿ ಇ-ಸ್ವತ್ತು ತಂತ್ರಾಂಶವನ್ನು ಜುಲೈ 18, 2014ರ ಸುತ್ತೋಲೆಯಂತೆ ಸಂಯೋಜನೆಗೊಳಿಸಲಾಗಿದೆ.

ನಗರ ಪ್ರದೇಶಗಳಲ್ಲಿನ ಕೃಷಿಯೇತರ ಆಸ್ತಿಗಳಿಗೆ ಸಂಬಂಧಿಸಿದಂತೆ ಇ-ಆಸ್ತಿ ತಂತ್ರಾಂಶ ರೂಪಿಸಿದ್ದು, ಇ-ಆಸ್ತಿ ತಂತ್ರಾಂಶವನ್ನು ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ 2.0 ತಂತ್ರಾಂಶದೊಂದಿಗೆ ಪ್ರಾಯೋಗಿಕವಾಗಿ ಚಾಮರಾಜನಗರ, ಚಿತ್ರದುರ್ಗ, ಬಾಗಲಕೋಟೆ ಮತ್ತು ರಾಯಚೂರು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಸ್ವತ್ತುಗಳಿಗೆ ಸಂಬಂಧಿಸಿದಂತೆ ಕಾವೇರಿ 2.0 ತಂತ್ರಾಂಶದೊಂದಿಗೆ ಸಂಯೋಜನೆ ಮಾಡಿ 9.9.2024 ರಿಂದ ನೋಂದಣಿ ಮಾಡುತ್ತಿರುವುದು ಯಶಸ್ವಿಯಾಗಿದೆ.

**ಪ್ರಮುಖ ಸುದ್ದಿ**

### ಧರ್ಮಸ್ಥಳ ಸಂಸ್ಥೆ ಪ್ರಾದೇಶಿಕ ನಿರ್ದೇಶಕಿ ಗೀತಾ.ಬಿ ಹೇಳಿಕೆ

# ಮಕ್ಕಳಿಗೆ ಧಾರ್ಮಿಕ ಜೊತೆಗೆ ವೈಜ್ಞಾನಿಕ ಚಿಂತನೆ ಮೂಡಿಸಬೇಕು

» **ಹೊಸದುರ್ಗ**

ಮಹಿಳೆಯರು ಪರಂಪರಗತವಾಗಿರುವ ಪೂಜೆ, ಭಜನೆ,ಧ್ಯಾನ, ಯೋಗವನ್ನು ನಮ್ಮ ಹಿರಿಯರು ಧಾರ್ಮಿಕ ಪ್ರಜ್ಞೆಯನ್ನು ಇಟ್ಟುಕೊಂಡು ಮಾಡಿರುತ್ತಾರೆ. ಲಕ್ಷ್ಮೀ ಪೂಜೆ ಮಾಡುವಾಗ ಹಣವನ್ನು ಇಟ್ಟು ಪೋಟೋವನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಾಕುತ್ತಿರುವುದು ಮನೆ ಕಳ್ಳತನ ಹೆಚ್ಚಾಗುತ್ತಿದೆ ಪೂಜೆಯನ್ನು ಗೌರವದಿಂದ ಮಾಡಬೇಕೆ ಹೊರತು ತೋರಿಕೆಗೆ ಮಾಡಬಾರದು . ಈ ರೀತಿ ಮಾಡುವುದರಿಂದ ಮುಂದೆ ಆಗುವು ಅನಾವುತಗಳನ್ನು ತಡೆಗಟ್ಟಬಹುದು. ಆದರೆ ಇತ್ತೀಚಿನ ದಿನಗಳಲ್ಲಿ ಯುವ ಪೀಳಿಗೆಗೆ ಹೆಚ್ಚು ತಾಯಂದಿರು ಅರಿವನ್ನು ಮೂಡಿಸಿದಾಗ ವೈಜ್ಞಾನಿಕವಾಗಿ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳುವ ಜೊತೆಗೆ ಸಮಾಜದ ಸ್ವಾಸ್ಥ್ಯವನ್ನು ರಕ್ಷಿಸಿದಂತಾಗುತ್ತದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಪ್ರಾದೇಶಿಕ ನಿರ್ದೇಶಕಿ ಗೀತಾ ತಿಳಿಸಿದರು.ತಾಲ್ಲೂಕಿನ ಕೆಲ್ಲೋಡಿನ



ಆಂಜನೇಯ ಸ್ವಾಮಿ ದೇವಾಸ್ಥಾನ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ (ರಿ) ವತಿಯಿಂದ ಹಮ್ಮಿಕೊಂಡಿದ್ದ ಶ್ರೀ ಸಾಮೂಹಿಕ ಮಹಾಲಕ್ಷ್ಮೀ ಪೂಜೆ ಸಭಾ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಆಧುನಿಕ ಸಾಮಾಜಿಕ ಜಾಲತಾಣಗಳಲ್ಲಿ ಮಹಿಳೆಯರು, ಮಕ್ಕಳು ಅತಿ ಹೆಚ್ಚು ಸಮಯ ಕಳೆಯುತ್ತಿರುವುದರಿಂದ ಕೌಟುಂಬಿಕ ಕಲಹಗಳು ಸಂಬಂಧಿಸಿದಂತೆ ಆರೋಗ್ಯದ ಸಮಸ್ಯೆಗಳು ಬರುತ್ತಿದ್ದು ಇದನ್ನು ತಡೆಗಟ್ಟಲು ಏಕೈಕ ಮಾರ್ಗ ತನ್ನ ಮನೆಯಲ್ಲಿ ಕುಟುಂಬದ ಸ್ವಾಸ್ಥ್ಯವನ್ನು ರಕ್ಷಣೆ ಮಾಡುವ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ತಿಳಿಸಿದರು.

ಸಮಾಕ ಸೇವಕರು ಬಿ ಜಿ ಅರುಣ್ ಗೋವಿಂದಪ್ಪ ಮಾತನಾಡಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸರ್ಕಾರ ಮಾಡುವ ಕೆಲಸಗಳ ಜೊತೆ ಕೈಜೋಡಿಸಿಕೊಂಡು ಮಾಡುತ್ತಿವೆ . ತಾಲ್ಲೂಕಿನಲ್ಲಿ ಒಟ್ಟು 8 ಕೆರೆಗಳು, ಕಡುಬಡವರಿಗೆ 6 ವಾತ್ಸಲ್ಯ ಮನೆಗಳು, 530 ವೃತ್ತಿಪರ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು 1 ಸಾವಿರ ದಂತೆ ಸ್ಕಾಲರ್ ಶಿಪ್ ಅನೇಕ ಕಾರ್ಯಕ್ರಮಗಳು ತಮ್ಮ ತಾಲ್ಲೂಕಿಗೆ ಉಪಯುಕ್ತವಾಗಿದೆ. ಇದಕ್ಕೆ ಡಾ.ವಿರೇಂದ್ರ ಹೆಗ್ಗಡೆ ಯವರಿಗೆ ಜನರ ಪರವಾಗಿ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀಮತಿ ಶಿಲ್ಪಾ ಮಧುಸೂಧನ್ ವಹಿಸಿದ್ದರು ಈ ಕಾರ್ಯಕ್ರಮದಲ್ಲಿ ಆಗ್ರೋ ಶಿವಣ್ಣ, ಸಮಾಜ ಸೇವಕರು, ಬೋರೇಶ್ ರೈತ ಸಂಘದ ಅಧ್ಯಕ್ಷರು, ಹಾಗೂ ಕ್ಷೇತ್ರ ಯೋಜನಾಧಿಕಾರಿ ಶಿವಣ್ಣ.ಎಸ್ ಪ್ರಾಸ್ತವಿಕವಾಗಿ ಮಾತನಾಡಿದರು. ಮತ್ತು ಈ ಕಾರ್ಯಕ್ರಮದಲ್ಲಿ ತುಕರಾಮ್, ರಮೇಶ್, ಕಮಲ, ಲಿಖಿತ್ ಹಾಗೂ ಪೂಜಾ ಕಾರ್ಯಕ್ರಮದಲ್ಲಿ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಾವಿರಾರು ಮಹಿಳೆಯರು ಭಾಗವಹಿಸಿದ್ದರು.

# ಮನಸಿನೊಳಗೊಂದು ಪಯಣ




**ಹೊರಗೆಲ್ಲೋ ಪ್ರವಾಸ,**

**ಇನ್ನೊಬ್ಬರ ವಿಮರ್ಶೆ,**

**ಬದುಕಿನ ಜಂಜಾಟ,**


**ಅಜ್ಞಾನ ಅಸಹನೆ ಅಹಂಕಾರ ಮುಂತಾದ ಕಾರಣಗಳಿಗಾಗಿ**

**ನಮ್ಮೊಳಗಿನ ಬೇಡಿಕೆಗಳ ಪೂರೈಕೆಯಲ್ಲಿ ನಮ್ಮ ಒಳಗಿನ ಪ್ರಯಾಣಕ್ಕೆ ಸಮಯವೇ ಇರುವುದಿಲ್ಲ.....**

**ಕೆಲವೊಮ್ಮೆ ಸಮಯವಿದ್ದರು ಅದರ ಆಗಾಧತೆಗೆ ಅಂಜಿ ಅದರೊಳಗೆ ಪ್ರವೇಶಿಸಲು ಭಯ ಮತ್ತು ನಿರಾಸಕ್ತಿ ಮೂಡುತ್ತದೆ.....**

**ನಮ್ಮೊಳಗೆ ನಾವು ಪ್ರವೇಶಿಸದ ಬದುಕು ಒಂದು ರೀತಿಯಲ್ಲಿ ಅಪೂರ್ಣ.......**

**ನಮ್ಮೊಳಗೆ ನಾವು ಪ್ರವೇಶಿಸುವುದು ಹೇಗೆ ಮತ್ತು ಅಲ್ಲಿನ ಪಯಣ ಹೇಗೆ.......**



## ಸೃಷ್ಟಿ......

75 ಭಾಗ ನೀರು - 25 ಭಾಗ ಭೂಮಿ.......

ಆ ಭೂಮಿಯ ಮೇಲೆ ಗಾಳಿ ನೀರು ಬೆಳಕು ಬೆಟ್ಟ ಗುಡ್ಡ ಕಾಡು ನದಿ ಸರೋವರ ವಿಚಿತ್ರ ಪ್ರಾಣಿಗಳು.....

ಅದರಲ್ಲೊಂದು ವೈಶಿಷ್ಟ್ಯದ ಪ್ರಾಣಿ ಎಂಬ ಮನುಷ್ಯ......

ಆ ಮನುಷ್ಯ ಪ್ರಾಣಿಯ ಬಣ್ಣದಲ್ಲಿ ಕಪ್ಪು ಬಿಳುಪು ಕಂದು ಎಂಬಿತ್ಯಾದಿ ಒಂದಷ್ಟು ವ್ಯತ್ಯಾಸಗಳು......

ಆ ವ್ಯತ್ಯಾಸಗಳಲ್ಲಿ ಈ ಪ್ರಾಣಿಯ ಆಚರಣೆಯಲ್ಲಿ ಹಿಂದೂ ಮುಸ್ಲಿಂ ಕ್ರಿಶ್ಚಿಯನ್ ಬೌದ್ಧ ಇತ್ಯಾದಿ ಇತ್ಯಾದಿ ಭಿನ್ನತೆಗಳು.....

ಆ ಭಿನ್ನತೆಗಳಲ್ಲಿ ಅಮೆರಿಕ ಚೀನಾ ಆಫ್ರಿಕಾ ರಷ್ಯಾ ಆಸ್ಟ್ರೇಲಿಯಾ ಪಾಕಿಸ್ತಾನ ಭಾರತ ಶ್ರೀಲಂಕಾ ಮುಂತಾದ ಪ್ರದೇಶಗಳ ವಿಂಗಡನೆ.....

ಆ ವಿಂಗಡನೆಗಳಲ್ಲಿ ಕನ್ನಡ ತಮಿಳು ಹಿಂದಿ ಇಂಗ್ಲಿಷ್ ಫ್ರೆಂಚ್ ಸಂಸ್ಕೃತ ಮುಂತಾದ ಅನೇಕ ಭಾಷಾ ಪ್ರಭೇಧಗಳು....

ಆ ಪ್ರಭೇಧಗಳ ಮನುಷ್ಯ ಪ್ರಾಣಿಗಳಲ್ಲಿ ಅಸ್ಪೃಶ್ಯ ಬ್ರಾಹ್ಮಣ ಗೌಡ ಲಿಂಗಾಯತ ಪಟೇಲ ಎಂಬಿತ್ಯಾದಿ ಭೇದಗಳು......

ಆ ಭೇದಗಳಲ್ಲಿ ಬಡವ ಶ್ರೀಮಂತ ಮೇಲು ಕೀಳು ವಿದ್ಯಾವಂತ ಅನಕ್ಷರಸ್ಥ ಎಂಬ ತಾರತಮ್ಯಗಳು.....

ಆ ತಾರತಮ್ಯಗಳಲ್ಲಿ ಜವಾನ ಅಧಿಕಾರಿ ಮಂತ್ರಿ ಒಡೆಯ ಆಳು ಕೂಲಿ ಎಂಬ ವಿಭಾಗಗಳು......

ಆ ವಿಭಾಗಗಳಲ್ಲಿ ಅಪ್ಪ ಅಮ್ಮ ಗಂಡ ಹೆಂಡತಿ ಮಕ್ಕಳು ಎಂಬ ಅನೇಕ ಸಂಬಂಧಗಳು......

ಆ ಸಂಬಂಧಗಳಲ್ಲಿ ಆರ್ಥಿಕ ಸಾಮಾಜಿಕ ಶೈಕ್ಷಣಿಕ ರಾಜಕೀಯ ಮುಂತಾದ ಅಸಮಾನತೆಗಳು....

ಆ ಅಸಮಾನತೆಗಳಲ್ಲಿ ನಮ್ಮ ಸ್ಥಾನಮಾನವನ್ನು ಸ್ಪಷ್ಟವಾಗಿ ಅರ್ಥಮಾಡಿಕೊಳ್ಳಬೇಕು.....

ಅಂದರೆ ಸೃಷ್ಟಿಯ ಮೂಲದಿಂದ ನಮ್ಮ ಯೋಚನಾ ಶಕ್ತಿ ರೂಪಗೊಳ್ಳಬೇಕು ಮತ್ತು ಪ್ರಾರಂಭವಾಗಬೇಕು......

## ಮುಂದೆ....

ಇಷ್ಟು ಅರ್ಥಮಾಡಿಕೊಳ್ಳುವ ವೇಳೆಗಾಗಲೇ ಸೃಷ್ಟಿಯಲ್ಲಿ ನಮ್ಮ ಅಸ್ತಿತ್ವದ ಒಂದು ಅಂದಾಜು, ಈ ಸಮಾಜ ಅಥವಾ ದೇಶದಲ್ಲಿ ಹಾಗು ಕೌಟುಂಬಿಕ ವ್ಯವಸ್ಥೆಯಲ್ಲಿ ನಮ್ಮ ಸ್ಥಾನಮಾನದ ಒಂದು ಚಿತ್ರಣ ನಮ್ಮ ಮನಸ್ಸಿನಲ್ಲಿ ಮೂಡುತ್ತದೆ.

ಆ ಮನಸ್ಸಿನ ಪ್ರವೇಶ ದ್ವಾರದ ಮೂಲಕ ಆತ್ಮದೊಳಗೆ ಹೆಜ್ಜೆ ಇಡಲು ಪ್ರಾರಂಭಿಸಿ....

ಇಲ್ಲಿಯವರೆಗಿನ ನಿಮ್ಮ ಅನುಭವ ಅಧ್ಯಯನ ಚಿಂತನೆ ಅರಿವು ಎಲ್ಲವನ್ನೂ ಒಟ್ಟುಗೂಡಿಸಿ ಒಂದೊಂದು ಹೆಜ್ಜೆ ಇಡುತ್ತಾ ಮುಕ್ತವಾಗಿ ಸಂಚರಿಸಿ......

ಸೊನ್ನೆಯಿಂದ ನೂರರವರೆಗಿನ ಸಮಯ ಅಥವಾ ಕಾಲವನ್ನು ಮನುಷ್ಯ ಪ್ರಾಣಿಯ ಜೀವನ ಅಥವಾ ಬದುಕು ಎಂದು ಪರಿಗಣಿಸಲಾಗುತ್ತದೆ.........

ಈ ಬದುಕಿನ ಪಯಣದ ಹಾದಿ ಅರ್ಥ ಉದ್ದೇಶ ಗುರಿ ಸಾರ್ಥಕತೆ ಸೃಷ್ಟಿಯ ಸಹಜತೆ ಎಲ್ಲವನ್ನೂ ನಮ್ಮ ತಿಳಿವಳಿಕೆಯ ಮಿತಿಯಲ್ಲಿ ನಾವು ಗ್ರಹಿಸಿದಂತೆ ನಮ್ಮೊಳಗೆ ಒಂದು ಆತ್ಮಾವಲೋಕನ ಮಾಡಿಕೊಳ್ಳಬೇಕು. ನಮ್ಮ ಜವಾಬ್ದಾರಿ ಕರ್ತವ್ಯ ಯಾವುದು ಎಂದು ಸ್ಪಷ್ಟಪಡಿಸಿಕೊಳ್ಳಬೇಕು. ನಮ್ಮ ದೇಹ ಮತ್ತು ಮನಸ್ಸಿನ ಬೇಡಿಕೆ ಮತ್ತು ಪೂರೈಕೆಯ ಮಾರ್ಗಗಳನ್ನು ಗುರುತಿಸಿಕೊಳ್ಳಬೇಕು.

ವೈಯಕ್ತಿಕತೆ, ಕೌಟುಂಬಿಕತೆ, ಸಾಮಾಜಿಕತೆ, ನೈತಿಕತೆ, ಮಾನವೀಯತೆ ಎಲ್ಲವನ್ನೂ ಸಮಗ್ರವಾಗಿ ಪರಿಶೀಲಿಸಿ ನಮ್ಮ ನಡೆಯನ್ನು ರೂಪಿಸಿಕೊಳ್ಳಲು ಪ್ರಯತ್ನಿಸಬೇಕು......

ಅತಿಮುಖ್ಯವಾಗಿ ಬದುಕಿನ ಏರಿಳಿತಗಳಲ್ಲಿ ನಮ್ಮ ಪ್ರತಿಕ್ರಿಯೆ ಮತ್ತು ನಿಯಂತ್ರಣ ಮನಸ್ಸಿನೊಳಗಿನ ಪಯಣದಲ್ಲಿ ಮಹತ್ವ ಪಡೆಯಬೇಕಾದ ವಿಷಯ.....

ಏಕೆಂದರೆ, ಈ ಪಯಣದಲ್ಲಿ ನಮ್ಮ ಹುಡುಕಾಟ ನಮ್ಮೊಳಗಿನ ಅಂತಃ ಶಕ್ತಿಯನ್ನು ಉದ್ದೀಪನಗೊಳಿಸುವಂತಿರಬೇಕು. ಭವಿಷ್ಯದ ಕನಸುಗಳಿಗೆ ನೀರೆರೆಯುವಂತಿರಬೇಕು. ನಮ್ಮಲ್ಲಿರುವ ಕತ್ತಲನ್ನು ಕಳೆದು ಬೆಳಕು ಮೂಡುವಂತಿರಬೇಕು. ನಮ್ಮ ನೆಮ್ಮದಿಯ ಮಟ್ಟ ಹೆಚ್ಚುವಂತಿರಬೇಕು. ಒಟ್ಟಿನಲ್ಲಿ ಈ ಪಯಣ ನಮ್ಮಲ್ಲಿ ಸ್ಫೂರ್ತಿ ತುಂಬಿ ನಮ್ಮನ್ನು ಪುನಶ್ಚೇತನ ಗೊಳಿಸುವಂತಿರಬೇಕು. ನಮ್ಮಲ್ಲಿನ ಸಂಕುಚಿತತೆ ಕಡಿಮೆಯಾಗಿ ವಿಶಾಲ ಮನೋಭಾವ ಬೆಳೆಸುವಂತಿರಬೇಕು.......

ಏಕೆಂದರೆ,ಮನಸ್ಸೆಂಬುದುರೀಚಾರ್ಜಬಲ್ ಬ್ಯಾಟರಿ ಇದ್ದಂತೆ. ಅದನ್ನು ಆಗಾಗ ರೀ ಚಾರ್ಜ್ ಮಾಡುತ್ತಲೇ ಇರಬೇಕು ಮತ್ತು ಅದನ್ನು ಹೊರಗಿನ ಮೂಲಗಳ ಜೊತೆಗೆ ಒಳಗಿನ ಸಂಪನ್ಮೂಲಗಳನ್ನು ಹೆಚ್ಚಾಗಿ ಬಳಸಿ ರೀ ಚಾರ್ಜ್ ಮಾಡಿದರೆ ಅದು ದೀರ್ಘ ಬಾಳಿಕೆ ಮತ್ತು ಹೆಚ್ಚು ದಕ್ಷತೆಯಿಂದ ಕ್ರಿಯಾತ್ಮಕವಾಗಿ ಕೆಲಸ ಮಾಡುತ್ತದೆ.....

ಅದಕ್ಕಾಗಿ ಆಗಾಗ ಅನಂತತೆಯೆಂಬ ಮನಸ್ಸಿನೊಳಗೆ ಸದಾ ಪಯಣಿಸುತ್ತಲೇ ಇರಬೇಕು. ಯಾರೋ ಯೋಗಿಗಳು, ಆಧ್ಯಾತ್ಮಿಕ ಗುರುಗಳು, ಸಾಧಕರು, ಋಷಿ ಮುನಿಗಳು ಮುಂತಾದವರು ಮಾತ್ರ ಮಾಡುವ ಮತ್ತು ಮಾಡಲು ಸಾಧ್ಯವಾಗುವ ವಿಷಯವಿದು. ಸಾಮಾನ್ಯ ಜನರಿಗೆ ಅಸಾಧ್ಯ ಎಂಬ ತಪ್ಪು ಕಲ್ಪನೆ ಮೂಡಿಸಲಾಗಿದೆ.....

ಎಲ್ಲಾ ಆರೋಗ್ಯವಂತ ಸಹಜ ಸಾಮಾನ್ಯ ವ್ಯಕ್ತಿಗಳು ಸಹ ತಮ್ಮ ಮನಸ್ಸಿನೊಳಗೆ ತಮಗೆ ಸಾಧ್ಯವಿರುವ ತಮ್ಮ ಮಿತಿಯಲ್ಲಿ ಸದಾ ಪ್ರಯಾಣಿಸಬಹುದು. ನೀವು ಸಹ ಸ್ವಚ್ಛಂದವಾಗಿ, ಮುಕ್ತವಾಗಿ ಪ್ರಯತ್ನಿಸಿ ನೋಡಿ. ಪರಿಣಾಮ - ಫಲಿತಾಂಶ ನಿಮ್ಮ ವಿವೇಚನೆಗೆ ಬಿಡುತ್ತಾ...,.

ಇದೊಂದು ದೀರ್ಘ ಮತ್ತು ನಿರಂತರ ಅಭ್ಯಾಸ. ಬದುಕಿನ ಕೊನೆಯ ಪುಟದವರೆಗೂ ನಡೆಯುತ್ತಲೇ ಇರಬೇಕು. ಆ ವ್ಯಕ್ತಿಯ ಜೀವನಮಟ್ಟ ಖಂಡಿತ ಸುಧಾರಣೆಯಾಗಿ ಕಿಣಚಿಟುಣಥಿ ಠಜಿ ಖಜಿಜ ಉನ್ನತ ದರ್ಜೆಗೇರುವ ಎಲ್ಲಾ ಸಾಧ್ಯತೆ ಇದೆ ಎಂಬ ಭರವಸೆ ಮೂಡಿಸುತ್ತಾ.......



■ ಲೇಖನ
ವಿವೇಕಾನಂದ.
ಹೆಚ್.ಕೆ.
9844013068

## ಸಂಚಾರಿ ಕುರಿಗಾರರಿಗೆ ಗುರುತಿನ ಚೀಟಿ ನೀಡಲು ಅರ್ಜಿ

**ದಾವಣಗೆರೆ:** ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ವತಿಯಿಂದ ಜಿಲ್ಲೆಯಲ್ಲಿ 20 ಕ್ಕೂ ಹೆಚ್ಚು ಕುರಿ, ಮೇಕೆಗಳನ್ನು ಹೊಂದಿರುವ ಅರ್ಹ ವಲಸೆ ಸಂಚಾರಿ ಕುರಿಗಾರರಿಗೆ ಗುರುತಿನ ಚೀಟಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಸಂಚಾರಿ ಕುರಿಗಾಹಿಗಳು ತಮ್ಮ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳಿಂದ ಅರ್ಜಿಗಳನ್ನು ಪಡೆದು, ವಲಸೆ ಕುರಿಗಾರರು ಎಂಬುದಕ್ಕೆ ಸ್ಥಳೀಯ ಗ್ರಾಮ ಲೆಕ್ಕಾಧಿಕಾರಿಗಳಿಂದ ಮಹಜರ್ ಪ್ರಮಾಣ ಪತ್ರ ಲಗತ್ತಿಸಿ ಸೂಕ್ತ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ತಮ್ಮ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶು ವೈದ್ಯಾಧಿಕಾರಿಗಳಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸ್ಥಳೀಯ ಪಶು ಆಸ್ಪತ್ರೆಯ ಪಶುವೈದ್ಯಾಧಿಕಾರಿಗಳು, ಆಯಾ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳು ಅಥವಾ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕರು ದಾವಣಗೆರೆ ಇವರನ್ನು ಸಂಪರ್ಕಿಸಲು ತಿಳಿಸಲಾಗಿದೆ.

## ಸ್ವಚ್ಛತಾ ಹೀ ಸೇವಾ, ಬಾಡಾ ಕ್ರಾಸ್ ನಿಂದ ಬಾತಿ ಕೆರೆವರೆಗೆ ಸ್ವಚ್ಛತಾ ಕಾರ್ಯ

**ದಾವಣಗೆರೆ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಸೆಪ್ಟೆಂಬರ್ 19 ರಂದು ಬೆಳಗ್ಗೆ 6.30 ರಿಂದ 9 ರವರೆಗೆ ಪಿಬಿ ರಸ್ತೆಯ ಬಾಡಾ ಕ್ರಾಸ್ ನಿಂದ ಬಾತಿ ಕೆರೆಯವರೆಗೆ ಸ್ವಚ್ಛತಾ ಹೀ ಸೇವಾ ಅಭಿಯಾನದ ಅಂಗವಾಗಿ ಸ್ವಚ್ಛತಾ ಕಾರ್ಯ ಆಯೋಜಿಸಲಾಗಿದೆ. ಸಂಗೊಳ್ಳಿ ರಾಯಣ್ಣ ವೃತ್ತದ ಬಳಿ ಸ್ವಚ್ಛತಾ ಪ್ರತಿಜ್ಞಾವಿಧಿ ಸ್ವೀಕರಿಸಲಾಗುತ್ತದೆ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T